ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 180 ಶೀರ್ಷಿಕೆ ಕೋಡ್: ಕೆಎಆರ್ ಕೆಎನ್ 28269 ಚಿತ್ರದುರ್ಗ ದಿನಾಂಕ: 31–01–2024 ಬುಧವಾರ ಪುಟ: 4 ಬೆಲೆ : ರೂ.2–00
Volume - 01 Issue - 180 Title- Code: KARKAN 28269 Chitradurga Date: 31-01-2024 Wednesday Page: 4 Price: Rs. 2-00

ಒಳಪುಟದ ಸುದ್ದಿಗಳು
ಶೈಕ್ಷಣಿಕ ಪ್ರಗತಿಯ ಜವಾಬ್ದಾರಿಯಲ್ಲಿ ಪೋಷಕರ ಪಾತ್ರ ಗಮನಾರ್ಹ: ಶಾಸಕ 2
ಕಾಂಗ್ರೆಸ್ ಹಿಂದೂ ವಿರೋಧಿ ನಡೆ ಖಂಡಿಸಿ ಬಿಜೆಪಿ ಪ್ರತಿಭಟನೆ 3
ಬಾಲ್ಯವಿವಾಹ, ಮಗುವಿನ ಜನನಕ್ಕೆ ಕಾರಣನಾದವನ ಮೇಲೆ ಪೋಕ್ಸೋ ಪ್ರಕರಣ 4

ಸುದ್ದಿ, ಜಾಹಿರಾತಿಗೆ 9686622252

ಶುಭ ನುಡಿ

ದೂರುಗಳು, ಟೀಕೆಗಳು, ಆಕ್ಷೇಪಣೆಗಳು ಏನೇ ಇರಲಿ, ಅವುಗಳಿಗೆಲ್ಲ ಮಾತಿನ ಪ್ರತಿಕ್ರಿಯೆಯ ಮೂಲಕವೇ ಉತ್ತರಿಸಬೇಕೆಂದೇನಿಲ್ಲ. ಸಣ್ಣ ನಗುವೊಂದನ್ನು ಚೆಲ್ಲಿ ನಿಶ್ಚಿಂತರಾಗಿಬಿಡಬಹುದು.

» ಶುಭೋದಯ

ರಾಮಭಕ್ತ ಗಾಂಧಿ ಕೊಂದಿದ್ದು ಗೋಡ್ಸೆ

ರಘುಪತಿ ರಾಘವ ರಾಜಾರಾಮ್ ಗಾಂಧಿ ಅವರಿಗೆ ಪ್ರಿಯವಾಗಿತ್ತು –ಇದು ಕಾಂಗ್ರೆಸ್ಸಿಗರಿಗೆಲ್ಲಾ ಇಷ್ಟವಾದ ಭಜನೆ: ಸಿಎಂ

» ನಮ್ಮ ಜನ ಸಮಾಚಾರ

ಬೆಂಗಳೂರು: ಎಲ್ಲ ಜಾತಿಧರ್ಮದವರು ಸೌಹಾರ್ದ ತೆಯಿಂದ ಬಾಳಬೇಕೆಂಬ ಕನಸನ್ನು ಕಂಡಿದ್ದ ಮಹಾತ್ಮಾ ಗಾಂಧೀಜಿಯವರು ಎಲ್ಲರನ್ನೂ ಸಮಾನವಾಗಿ ಕಾಣುವ, ಎಲ್ಲರಿಗೂ ನ್ಯಾಯವನ್ನು ಒದಗಿಸುವುದೇ ಅವರ ರಾಮರಾಜ್ಯದ ಪರಿಕಲ್ಪನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಮಂಗಳವಾರ ವಿಧಾನಸೌಧದಲ್ಲಿ ಮಹಾತ್ಮಾಗಾಂಧೀಜಿಯವರ ಭಾವ ಚಿತ್ರಕ್ಕೆ ಮಾಲಾರ್ಪಣೆ ಮಾಡಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು.

ಇಂದು ಮಹಾತ್ಮಾ ಗಾಂಧೀಜಿಯವರು 1948ರ ಜನವರಿ 30 ರಂದು ಗೋಡ್ಸೆ ಯವರಗುಂಡಿಗೆಬಲಿಯಾಗಿಹುತಾತ್ಮರಾದ ದಿನ. ಗಾಂಧೀಜಿಯವರು ವಲ್ಲಭಾ ಬಾಯಿ ಪಟೇಲರೊಂದಿಗೆ ಸಂವಾದಿಸಿದ ನಂತರ ಭಜನೆಗೆ ತೆರಳಲು ಸ್ವಲ್ಪ ವಿಳಂಬವಾಗಿದ್ದ ಸಂದರ್ಭದಲ್ಲಿ ಹಂತಕ ಗೋಡ್ಸೆ, ಗಾಂಧೀಜಿಯವರ ಕಾಲಿಗೆ ನಮಸ್ಕರಿಸುವ ನೆಪದಲ್ಲಿ ಅವರನ್ನು ಹತ್ಯೆಗೈದರು. ಈ ದೇಶಕ್ಕೆ ಅವರ ನಾಯಕತ್ವದಲ್ಲಿ ಸ್ವಾತಂತ್ರ್ಯ ಲಭಿಸಿತು. ಕಾಂಗ್ರೆಸ್ ನ ಬಹಳಷ್ಟು ನಾಯಕರು ದೇಶದ ಸ್ವಾತಂತ್ರ್ಯಕ್ಕಾಗಿ ತ್ಯಾಗ ಬಲಿದಾನಗಳನ್ನು ಮಾಡಿದ್ದಾರೆ ಎಂದರು.

ಶ್ರೀರಾಮನ ಮೇಲೆ ಗಾಂಧಿಯವರಿಗೆ ಅಪಾರ ಭಕ್ತಿ: ಅವರು ತಮ್ಮ ಕೊನೆಯುಸಿರೆಳೆದಾಗಲೂ 'ಹೇ ರಾಮ್' ಎಂದು ಉಚ್ಚರಿಸಿದ್ದರು. ಶ್ರೀ ರಾಮನ ಬಗ್ಗೆ ಅಪಾರ ಭಕ್ತಿ, ನಂಬಿಕೆಯನ್ನು ಹೊಂದಿದ್ದರು. ಆದ್ದರಿಂದಲೇ 'ರಘುಪತಿ ರಾಘವ ರಾಜಾರಾಮ್ ' ಎಂಬುದು ಅವರ ನೆಚ್ಚಿನ ಭಜನೆಯಾಗಿತ್ತು. ಶ್ರೀರಾಮ

ಪಿತೃವಾಕ್ಯ ಪರಿಪಾಲಕನಾಗಿದ್ದು, ಹದಿನಾಲ್ಕು ವರ್ಷಗಳ ಕಾಲ ವನವಾಸಕ್ಕೆ ತೆರಳಿದ್ದರು. ಆದರ್ಶಮಯ ಆಡಳಿತವನ್ನು ನೀಡಿದ ಶ್ರೀರಾಮಚಂದ್ರನನ್ನು ಪೂಜಿಸುವ ಮಹಾತ್ಮಾ ಗಾಂಧಿಯವರನ್ನು ಮತಾಂಧನಾಗಿದ್ದ ಗೋಡ್ಸೆ ಹತ್ಯೆಗೈಯುತ್ತಾರೆ. ಅವರ ಆದರ್ಶದಲ್ಲಿ ನಡೆದು ನಾವೆಲ್ಲರೂ ಎಲ್ಲ ಧರ್ಮದವರನ್ನೂ ಸಮಾನವಾಗಿ ಕಾಣಬೇಕು. ಸತ್ಯ ಅಹಿಂಸೆಯ ಹಾದಿಯನ್ನು ತೋರಿದ ಗಾಂಧೀಜಿಯವರನ್ನು ರಾಷ್ಟ್ರಪಿತ ಎಂದು ಕರೆಯಲಾಗುತ್ತದೆ. ಅಂತಹ ಮಹಾನ್ ವ್ಯಕ್ತಿಯ ಹತ್ಯೆಗೈದ ಗೋಡ್ಸೆಯನ್ನು ಪೂಜಿಸುವವರು ನಮ್ಮ ನಡುವೆ ಇದ್ದಾರೆ. ರಾಜ್ಯದ ಜನತೆ ಹಾಗೂ ಸರ್ಕಾರದ ಪರವಾಗಿ ಮಹಾತ್ಮಾ ಗಾಂಧೀಜಿಯವರಿಗೆ ನಮ್ಮ ನಮನಗಳನ್ನು ಸಲ್ಲಿಸುತ್ತೇನೆ ಎಂದರು.

ಸಮಾಜದಲ್ಲಿ ಶಾಂತಿ ನೆಲೆಸಬೇಕು: ಗಾಂಧೀಜಿಯವರು ಶಾಂತಿ ಸಂದೇಶವನ್ನು ಸಾರಿದರು. ಆದರೆ ಇತ್ತೀಚೆಗೆ ಸಮಾಜದಲ್ಲಿ ಶಾಂತಿಯನ್ನು ಕದಡುವ ಪ್ರಸಂಗಗಳು ನಡೆಯುತ್ತಿವೆಯೇ ಎಂಬ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿ, ಗೋಡ್ಸೆಯ ಅನುಯಾಯಿಗಳು ಸಮಾಜದಲ್ಲಿ ಶಾಂತಿಯನ್ನು ಕದಡುತ್ತಿದ್ದಾರೆ. ಪರಸ್ಪರ ಪ್ರೀತಿ ವಿಶ್ವಾಸ ಹಾಗೂ ಶಾಂತಿ ಸಮಾಜದಲ್ಲಿ ನೆಲೆಸಬೇಕು. ಮನುಷ್ಯ ಮನುಷ್ಯರ ನಡುವೆ ವೈಷಮ್ಯ ಹೆಚ್ಚಿಸುವ ಕೆಲಸವಾಗಬಾರದು ಎಂದರು.

ಮಂಡ್ಯ ಘಟನೆ: ರಾಜಕೀಯ ದುರುದ್ದೇಶದಿಂದ ಕೂಡಿದೆ: ಜಿಲ್ಲಾಡಳಿತದ ವೈಫಲ್ಯದಿಂದ ಮಂಡ್ಯ ಘಟನೆ ನಡೆದಿದೆ ಎಂದು ಸಂಸದೆ ಸುಮಲತಾ ದೂಷಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ರಾಷ್ಟ್ರಧ್ವಜ ಅಥವಾ ಕನ್ನಡ ಧ್ವಜ ಹಾರಿಸಲು ಅನುಮತಿ ನೀಡಲಾಗಿತ್ತೇ ಹೊರತು ಯಾವುದೇ ಧರ್ಮ ಜಾತಿ, ಪಕ್ಷದ ಧ್ವಜವನ್ನು ಹಾರಿಸುವುದಿಲ್ಲ ಎಂದು ಮುಚ್ಚಳಿಕೆ ಪತ್ರ ನೀಡಿದ ನಂತರ ಅದರ ವಿರುದ್ಧವಾಗಿ ನಡೆದುಕೊಂಡಿದ್ದಾರೆ. ಇದರಿಂದ ರಾಜಕೀಯ ಲಾಭ ಪಡೆಯುವ ದುರುದ್ದೇಶ ಇದ್ದು, ಸಮಾಜದಲ್ಲಿ ಅಶಾಂತಿಯನ್ನು ಉಂಟು ಮಾಡುವ ಪ್ರಯತ್ನ ಮಾಡಲಾಗಿದೆ.

ಫೆಬ್ರವರಿ 8 ರಂದು ಮಂಡ್ಯ ಬಂದ್ ಮಾಡಲು ಮಾಜಿ ಸಿಎಂ ಕುಮಾರಸ್ವಾಮಿಯವರು ಕರೆ ನೀಡಿರುವುದಕ್ಕೆ ಪ್ರತಿಕ್ರಿಯೆ ನೀಡಿ, ಬಂದ್ ಮಾಡುವ ಅಥವಾ ಮಾಡದಿರುವ ಬಗ್ಗೆ ಜನ ತೀರ್ಮಾನ ಮಾಡುತ್ತಾರೆ. ಇವರೇ ಮುಚ್ಚಳಿಕೆ ಪತ್ರ ನೀಡಿ, ನಂತರ ಕಾರ್ಯಕ್ರಮದಲ್ಲಿ ಕೇಸರಿ ಧ್ವಜವನ್ನು ಹಾರಿಸಿ, ತಮ್ಮ ಮುಚ್ಚಳಿಕೆಯನ್ನು ತಾವೇ ಉಲ್ಲಂಘನೆ ಮಾಡಿರುವುದು ತಪ್ಪು ಎಂದರು.

ಕಾರ್ಯಕ್ರಮದಲ್ಲಿ ಸಚಿವ ಕೆ.ಎಚ್. ಮುನಿಯಪ್ಪ, ಮಾಜಿ ಸಚಿವ ಎಚ್. ಆಂಜನೇಯ ಸೇರಿದಂತೆ ಅಧಿಕಾರಿ ವರ್ಗದವರು ಉಪಸ್ಥಿತರಿದ್ದರು

ಅಸಂಘಟಿತ ಕಾರ್ಮಿಕರಾಗಿರುವ ಟೈಲರ್‌ಗಳ ಹಿತ ಕಾಯಲು ಸರ್ಕಾರ ಬದ್ಧ: ಸಿಎಂ

» ನಮ್ಮ ಜನ ಸಮಾಚಾರ

ಬೆಂಗಳೂರು: ಟೈಲರ್ ಗಳ ಕ್ಷೇಮನಿಧಿ ಮಂಡಳಿ ರಚನೆ ಬಗ್ಗೆ ಕಾರ್ಮಿಕ ಸಚಿವರ ಜತೆ ಚರ್ಚಿಸಿ ಸೂಕ್ತ ತೀರ್ಮಾನ ತೆಗೆದುಕೊಳ್ಳುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.

ಜಯನಗರ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯ ಟೈಲರ್ಸ್ ಅಸೋಸಿಯೇಷನ್ ನ 25 ನೇ ವರ್ಷದ ರಜತ ಮಹೋತ್ಸವವನ್ನು ಉದ್ಘಾಟಿಸಿ ಮಾತನಾಡಿದರು.

ಅಸಂಘಟಿತ ಕಾರ್ಮಿಕರಾಗಿರುವ ಟೈಲರ್ ಗಳ ಹಿತ ಕಾಯಲು ಸರ್ಕಾರ ಬದ್ಧವಾಗಿದೆ. ಶ್ರಮಿಕ ವರ್ಗದ ಜನ ಈ ನಾಡಿನ ಆಸ್ತಿ. ಅಸಂಘಟಿತ ಕಾರ್ಮಿಕರಾಗಿರುವ ಟೈಲರ್ ಗಳ ರಕ್ಷಣೆ ನಮ್ಮ ಕರ್ತವ್ಯ. ನಾವು ನಿಮ್ಮ ಜತೆಗೆ ಇದ್ದೇವೆ ಎಂದರು.

ಇಂದು ಹುತಾತ್ಮರ ದಿನ. ನಮಗೆ ಸ್ವಾತಂತ್ರ್ಯ ದೊರಕಿಸಿಕೊಟ್ಟ ಶ್ರೀರಾಮನ ಅಪಾರ ಭಕ್ತ ಮಹಾತ್ಮಗಾಂಧಿಯನ್ನು ನಾಥೂರಾಂ ಗೋಡ್ಸೆ ಕೊಂದು ಹಾಕಿದ ದಿನ. ಹಂತಕ ಗೋಡ್ಸೆ ಬೆಂಬಲಕ್ಕೆ ನಿಂತಿರುವವರು ಯಾರು ಎನ್ನುವುದು ಎಲ್ಲರಿಗೂ ಗೊತ್ತಿದೆ. ಅವರು ಸಮಾಜ ವಿರೋಧಿಗಳು ಎಂದರು.

ವಸತಿ ಸಚಿವ ಜಮೀರ್ ಅಹಮದ್, ಶೃಂಗೇರಿ ಶಾಸಕರಾದ ರಾಜುಗೌಡ, ಅಸೋಸಿಯೇಷನ್ ಅಧ್ಯಕ್ಷರಾದ ನಾರಾಯಣ್ ಸೇರಿ ಹಲವು ಪದಾಧಿಕಾರಿಗಳು ಉಪಸ್ಥಿತರಿದ್ದರು.

ಫಾಸ್ಟ್ ನ್ಯೂಸ್

ಫೆ.1ರಂದು ಮಡಿವಾಳ ಮಾಚಿದೇವ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರ ಸಹಯೋಗದಲ್ಲಿ ಮಡಿವಾಳ ಮಾಚಿದೇವ ಜಯಂತಿ ಆಚರಣೆ ಸಮಾರಂಭವನ್ನು ಫೆಬ್ರವರಿ 1ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವರು ಹಾಗೂ ಸಂಸದ ಎ.ನಾರಾಯಣಸ್ವಾಮಿ ಘನ ಉಪಸ್ಥಿತಿ ವಹಿಸುವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಭಾಷಾ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಡಾ.ಎಂ.ಚಂದ್ರಪ್ಪ, ಎನ್.ವೈ. ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ.ನಾರಾಯಣಸ್ವಾಮಿ, ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಜಿಲ್ಲಾ ಮಡಿವಾಳರ ಸಂಘದ ಅಧ್ಯಕ್ಷ ಬಿ.ರಾಮಪ್ಪ, ಕಾರ್ಯದರ್ಶಿ ಕೆ.ಆರ್.ಮಂಜುನಾಥ್, ರಾಜ್ಯ ಮಡಿವಾಳರ ಸಂಘದ ಮಹಿಳಾ ಘಟಕ ಗೌರವಾಧ್ಯಕ್ಷೆ ಬಿ.ರಂಗಮ್ಮ, ಜಿಲ್ಲಾ ಮಡಿವಾಳ ಸಂಘದ ಮಹಿಳಾ ಘಟಕ ಅಧ್ಯಕ್ಷೆ ವೀಣಾ ಗೌರಣ್ಣ ಹಾಗೂ ಜಿಲ್ಲೆಯ ಸಮಸ್ತ ಮಡಿವಾಳ ಸಮಾಜದ ಜನಪ್ರತಿನಿಧಿಗಳು ಗೌರವಾನ್ವಿತ ಮುಖಂಡರು ಹಾಗೂ ಗಣ್ಯರು ಭಾಗವಹಿಸುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ. ಮಲ್ಲಿಕಾರ್ಜುನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎನ್‌ಎಸ್‌ಎಸ್ ಘಟಕಗಳ ಸಮಾರೋಪ ಸಮಾರಂಭ

» ಚಿತ್ರದುರ್ಗ

ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಚಿತ್ರದುರ್ಗ ಇವರ ಸಹಯೋಗದಲ್ಲಿ ಕ್ರೀಡಾ, ಸಾಂಸ್ಕೃತಿಕ, ರೋವರ್ಸ್, ಹಾಗೂ ಎನ್.ಎಸ್. ಎಸ್. ಘಟಕಗಳ ಸಮಾರೋಪ ಸಮಾರಂಭವನ್ನು ಇದೇ ಜ.31ರಂದು ಬೆಳಿಗ್ಗೆ 11ಕ್ಕೆ ನಗರದ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಪುಟ್ಟಸ್ವಾಮಿ ಭಾಗವಹಿಸುವರು. ಕಾಲೇಜಿನ ಪ್ರಾಂಶುಪಾಲ ಎಚ್.ಬಿ.ನರಸಿಂಹಮೂರ್ತಿ ಅಧ್ಯಕ್ಷತೆ ವಹಿಸುವರು. ಪ್ರಸಿದ್ಧ ಜನಪ್ರಿಯ ಗಾಯಕರು ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ.ಅಪ್ಪಗೆರೆ ತಿಮ್ಮರಾಜು ಸಮಾರೋಪ ನುಡಿಗಳನ್ನಾಡುವರು ಎಂದು ಡಾ.ಬಿ.ಎಂ.ಗುರುನಾಥ್ ತಿಳಿಸಿದ್ದಾರೆ.

ಮಹಾತ್ಮಾ ಗಾಂಧೀಜಿ ಪುಣ್ಯತಿಥಿ: ಜಿಲ್ಲಾಧಿಕಾರಿಗಳಿಂದ ಪುಷ್ಪನಮನ

» ಚಿತ್ರದುರ್ಗ

ಮಹಾತ್ಮಾ ಗಾಂಧೀಜಿಯವರ ಪುಣ್ಯ ತಿಥಿ ಅಂಗವಾಗಿ ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗಾಂಧೀಜಿಯವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಸಮರ್ಪಿಸಿದರು. ಗಾಂಧೀಜಿಯವರ ಪುಣ್ಯತಿಥಿ ನಿಮಿತ್ತ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು ಎರಡು ನಿಮಿಷಗಳ ಮೌನ ಆಚರಿಸಿ, ನಮನ ಸಲ್ಲಿಸಿದರು. ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಕಾರ್ತಿಕ್, ಆಹಾರ ಇಲಾಖೆ ಜಂಟಿನಿರ್ದೇಶಕ ಮಧುಸೂಧನ್ ಕೆ.ಪಿ., ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದು, ನಮನ ಸಲ್ಲಿಸಿದರು.

ಪರಶುರಾಮಪುರ ಗ್ರಾಪಂ ವ್ಯಾಪ್ತಿಯಲ್ಲಿ ಇಂದು ವಿದ್ಯುತ್ ಇರಲ್ಲ

» ಚಳ್ಳಕೆರೆ

ಬೆಸ್ಕಾಂನ ಚಳ್ಳಕೆರೆ ಉಪವಿಭಾಗದ 66/11 ಕೆ.ವಿ.ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕಾಮಗಾರಿ ಇರುವುದರಿಂದ ಜ.31ರ ಬುಧವಾರ ಬೆಳಗ್ಗೆ 10ರಿಂದ ಸಂಜೆ 4ರ ತನಕ ವಿದ್ಯುತ್ ಸರಬರಾಜನ್ನು ಸ್ಥಗಿತಗೊಳಿಸಲಾಗುವುದು ಎಂದು ಎಇಇ ರಾಜು ತಿಳಿಸಿದ್ದಾರೆ. ಅವರು ಈ ಬಗ್ಗೆ ಮಾಹಿತಿ ನೀಡಿ, ಜಾಜೂರು, ಚನ್ನಮ್ಮನಾಗತಿಹಳ್ಳಿ, ಮೀರಸಾಬಿಹಳ್ಳಿ, ದೊಡ್ಡೇರಿ, ಚೌಳೂರು, ದೊಡ್ಡಬೀರನಹಳ್ಳಿ ಹಾಗೂ ಪರಶುರಾಮಪುರ ಶಾಖಾ ವ್ಯಾಪ್ತಿಯ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಮನವಿ ಮಾಡಿದ್ದಾರೆ.

ಬಿಜೆಪಿ, ಜೆಡಿಎಸ್ ಮೈತ್ರಿ ಮಾಡಿಕೊಂಡಿದ್ದರೂ ಪುಟ್ಟಣ್ಣ ಗೆದ್ದೇ ಗೆಲ್ಲುತ್ತಾರೆ: ಸಿದ್ದರಾಮಯ್ಯ

» ನಮ್ಮ ಜನ ಸಮಾಚಾರ

ಬೆಂಗಳೂರು : ಬಿಜೆಪಿ –ಜೆಡಿಎಸ್ ಸೋಲುತ್ತೇವೆ ಎಂಬ ಭಯದಿಂದಲೇ ಮೈತ್ರಿ ಮಾಡಿಕೊಂಡಿದ್ದಾರೆ. ಮೈತ್ರಿ ಮಾಡಿಕೊಂಡಿದ್ದರೂ ಕೂಡ ಪುಟ್ಟಣ್ಣ ಅವರು ನೂರಕ್ಕೆ ನೂರು ಗೆದ್ದೇ ಗೆಲ್ಲುತ್ತಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದರು.

ಅವರು ಇಂದು ಬೆಂಗಳೂರು ಶಿಕ್ಷಕರ ಕ್ಷೇತ್ರದ ಅಭ್ಯರ್ಥಿ ಪುಟ್ಟಣ್ಣ ಅವರಿಂದ ನಾಮಪತ್ರ ಸಲ್ಲಿಕೆಯಾದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು.

ಪುಟ್ಟಣ್ಣ ವಿಧಾನಸಭಾ ಚುನಾವಣೆಗೆ ನಿಲ್ಲಲು ದಕ್ಷಿಣ ಶಿಕ್ಷಕರ ಕ್ಷೇತ್ರದಿಂದ ರಾಜೀನಾಮೆ ಕೊಟ್ಟಿದ್ದ ಕ್ಷೇತ್ರವಿದು. ಉಪಚುನಾವಣೆಗೆ ಐದನೇ ಬಾರಿ ಸ್ಪರ್ಧೆ ಮಾಡುತ್ತಿದ್ದಾರೆ. ಹಿಂದೆಯೂ ಬಿಜೆಪಿ, ಜೆಡಿಎಸ್ ಸ್ಪರ್ಧೆ ಮಾಡಿದ್ದರೂ ಆದರೂ ಬಿಜೆಪಿ, ಜೆಡಿಎಸ್ ನವರನ್ನು ಸೋಲಿಸಿ ಪುಟ್ಟಣ್ಣ ಗೆದ್ದಿದ್ದರು. ಸತತವಾಗಿ ನಾಲ್ಕು ಬಾರಿ ಶಿಕ್ಷಕರ ಕ್ಷೇತ್ರದಿಂದ ಗೆಲ್ಲಬೇಕೆಂದರೆ ಶಿಕ್ಷಕರ ಬೆಂಬಲವನ್ನು ಪಡೆದಿದ್ದು, ಅವರ ಮನಸ್ಸನ್ನು ಗೆದ್ದಿದ್ದಾರೆ. ಹಾಗಾಗಿ ಅವರನ್ನು ಶಿಕ್ಷಕರು ಒಪ್ಪಿದ್ದಾರೆ ಎಂದರು.

ಜೆಡಿಎಸ್ – ಬಿಜೆಪಿ ಜನರಿಗೆ ಪ್ರಚೋದನೆ ನೀಡಿ ಗಲಾಟೆ ಶಾಂತಿ ಕದಡಿದ್ದಾರೆ ಮಂಡ್ಯ ಘಟನೆಯ ವಿಚಾರವಾಗಿ ಹೆಚ್.ಡಿ. ಕುಮಾರಸ್ವಾಮಿಯವರು ಪತ್ರಿಕಾಗೋಷ್ಠಿ ನಡೆಸಿ ನನ್ನ ತಪ್ಪಿದ್ದರೆ ನೇಣಿಗೆ ಹಾಕಲಿ ಎಂದಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಕುಮಾರಸ್ವಾಮಿಯವರೇ ಪ್ರಚೋದನೆ ಮಾಡಿ ಗಲಾಟೆ ಮಾಡಿಸಿದ್ದಾರೆ. ಜೆಡಿಎಸ್ – ಬಿಜೆಪಿ ಜನರಿಗೆ ಪ್ರಚೋದನೆ ನೀಡಿ ಗಲಾಟೆ ಶಾಂತಿ ಕದಡಿದ್ದಾರೆ.

ಪುಟ 2

ಚಿನ್ನದ ಬೆಲೆ	
91.6 ಕೆಡಿಎಂ (ಗ್ರಾಂ)	5830
85 ಕೆಡಿಎಂ (ಗ್ರಾಂ)	5330

ಬೆಳ್ಳಿ ಬೆಲೆ	
ಕೆಜಿ	67500

ಶೈಕ್ಷಣಿಕ ಸಹಾಯಧನ ಬಿಡುಗಡೆಗೆ ಆಗ್ರಹ

» ಚಿತ್ರದುರ್ಗ

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಂಡಳಿ ಇವರಿಂದ ನೊಂದಾಯಿತ ಕಟ್ಟಡ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಸಹಾಯಧನ ವಿಳಂಭ ಧೋರಣೆಯನ್ನು ಖಂಡಿಸಿ ಚಿತ್ರದುರ್ಗ ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಕರ್ನಾಟಕ ರಾಜ್ಯ ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ದೊರಕಬೇಕಾದ ನೊಂದಾಯಿತ ಕಟ್ಟಡ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಸಹಾಯಧನ ತುರ್ತು ಮಂಜೂರು ಮಾಡಬೇಕು. ನೊಂದಾಯಿತ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಸಹಾಯಧನ 2022–23ನೇ ಸಾಲಿನದ್ದು, ಇಲ್ಲಿಯವರೆಗೂ ಮಂಜೂರು ಮಾಡಿರುವುದಿಲ್ಲ.

ಕೂಡಲೇ ಪರಿಶೀಲಿಸಿ ಮಂಜೂರು ಮಾಡಬೇಕು. ಈಗಾಗಲೇ 2023ನೇ ಸಾಲಿನ ಶೈಕ್ಷಣಿಕ ಸಾಲಿನ ಅವಧಿ ಮುಗಿಯುತ್ತಾ ಬಂದಿರುವುದರಿಂದ ಕೂಡಲೇ ಸರ್ಕಾರ ಮಂಡಳಿಯ ಗಮನಕ್ಕೆ ತಂದು ಧನ ಸಹಾಯವನ್ನು ಮಂಜೂರು ಮಾಡಬೇಕು.

ನೊಂದಾಯಿತಕಟ್ಟಡಕಾರ್ಮಿಕನಮಕ್ಕಳ ಮದುವೆ ಸಹಾಯಧನವನ್ನು 1,00,000 ಲಕ್ಷಕ್ಕೆ ಹೆಚ್ಚಿಸಬೇಕು. ನೊಂದಾಯಿತ ಕಟ್ಟಡ ಕಾರ್ಮಿಕ ಮಹಿಳೆಯು ಹೆರಿಗೆಯಾದ 6 ತಿಂಗಳ ಕಾಲ ತನ್ನ ಮಗುವಿನ ಪೋಷಣೆಯಲ್ಲಿ ತೊಡಗಿರುತ್ತಾಳೆ. ಆದ ಕಾರಣ ಅಂತಹ ಮಹಿಳೆಗೆ ಪ್ರತ್ಯೇಕವಾಗಿ 60,000 ಸಾವಿರ ರೂ ಹಣವನ್ನು ಮಂಜೂರು ಮಾಡಬೇಕು. ಕಾರಣ ಈ ಹಿಂದೆ ಆದೇಶದ ಪ್ರತಿಯಲ್ಲಿ ಕೆಲವು ನಿಬಂಧನೆಗಳಿದ್ದು, ತಾಯಿ & ಮಗುವಿನ ಹೆಸರಿನಲ್ಲಿ ಬಾಂಡ್ ಮಾಡಲಾಗಿರುತ್ತದೆ. ಅದನ್ನು ಹೊರತು ಪಡಿಸಿ ಕಾರ್ಮಿಕ ಮಹಿಳೆಗೆ ಪ್ರತ್ಯೇಕವಾಗಿ 60,000 ಸಾವಿರ ರೂಪಾಯಿಗಳ ಸಹಾಯಧನ ನೀಡಿದಲ್ಲಿ ಕಾರ್ಮಿಕ ಮಹಿಳೆಗೆ ಅನುಕೂಲವಾಗುತ್ತದೆ ಎಂದರು.

ನೋಂದಾಯಿತ ಕಟ್ಟಡ ಕಾರ್ಮಿಕನು 60 ವರ್ಷ ಪೂರೈಸಿದ ನಂತರ ಪಡೆಯಿತ್ತಿರುವ 3000 ಸಾವಿರ ಬದಲಾಗಿ ಪಿಂಚಣಿ ಸೌಲಭ್ಯವನ್ನು 5000 ಸಾವಿರ ರೂಗಳಿಗೆ ಹೆಚ್ಚಿಸಬೇಕು.ನೊಂದಾಯಿತ ಕಟ್ಟಡ ಕಾರ್ಮಿಕನ ಸಹಜ ಸಾವಿನ ಮರಣಕ್ಕೆ 2,00,000 ಲಕ್ಷದವರೆಗೆ ಮರಣ ಸಹಾಯಧನವನ್ನು ಹೆಚ್ಚಿಗೆ ಮಾಡಬೇಕು.ನೊಂದಾಯಿತ ಕಟ್ಟಡ ಕಾರ್ಮಿಕನು ಕೆಲಸಕ್ಕೆ ಹೋಗುವ ಮಾರ್ಗ ಮಧ್ಯೆ ಅಥವಾ ಕೆಲಸ ಮುಗಿಸಿ ಮನೆಗೆ ಹೋಗುವ ಮಾರ್ಗ ಮಧ್ಯೆ ಹಾಗೂ ಬಿಲ್ಡಿಂಗ್ ಸೆಂಟ್ರಿಂಗ್ ಕುಸಿತ ಇತ್ಯಾದಿ ಅವಘಡ ಸಂಭವಿಸಿ ದುರ್ಮರಣ ಹೊಂದಿದ ಫಲಾನುಭವಿಗೆ 10,00,000/– ಸಹಾಯಧನ ನೀಡಬೇಕು ಎಂದು ಒತ್ತಾಯಿಸಲಾಯಿತು.

ನೊಂದಾಯಿತ ಕಟ್ಟಡ ಕಾರ್ಮಿಕನು ಮಳೆ, ಚಳಿ, ಗಾಳಿ ಎನ್ನದೆ ಕಟ್ಟಡ ನಿರ್ಮಾಣದಲ್ಲಿ ತೊಡಗಿಸಿಕೊಂಡಿರುತ್ತಾರೆ. ಆದ ಕಾರಣ ಕಾರ್ಮಿಕ ಆರೋಗ್ಯದ ಮುನ್ನಚ್ಚರಿಕೆ ಇ.ಎಸ್.ಐ ಸೌಲಭ್ಯ ನೀಡಬೇಕು.ಕಟ್ಟಡ ಕಾರ್ಮಿಕನು ಕೂಲಿ ಮಾಡಿದ ಹಾಜರಾತಿವಂತಿಕೆ ಹಾಗೂ ಹಣದ ವಂತಿಕೆಯನ್ನು ಮಂಡಳಿಗೆ ನೊಂದಾಯಿಸಲಾಗುವುದಿಲ್ಲ, ಏಕೆಂದರೆ ವಾರಕ್ಕೆ ಒಂದು ಕಡೆ ಕೆಲಸ ಮಾಡುವುದರಿಂದ ವಂತಿಕೆ ಪಾವತಿ ಮಾಡಲು ಕಷ್ಟವಾಗುತ್ತದೆ ಮತ್ತು ಮಂಡಳಿ ಈ ಕಾಯ್ದೆಯನ್ನು ಹಿಂಡೆಯಬೇಕು.

ಚಿತ್ರದುರ್ಗ ಜಿಲ್ಲಾದ್ಯಾಂತ 1,60,000 ಸಾವಿರಕ್ಕಿಂತ ಹೆಚ್ಚು ಕಾರ್ಮಿಕರು ಮಂಡಳಿಯಲ್ಲಿ ನೊಂದಣಿ ಮಾಡಿಕೊಂಡಿದ್ದು, ಚಿತ್ರದುರ್ಗ ತಾಲ್ಲೂಕು ಹೆಡ್ ಕ್ವಾಟರ್‌ನಲ್ಲಿ 45000 ಸಾವಿರ ಕಟ್ಟಡ ಕಾರ್ಮಿಕರು ನೊಂದಾಯಿಸಿಕೊಂಡಿರುತ್ತಾರೆ. 2008 & 2015ನೇ ಸಾಲಿನ ನೊಂದಾಯಿತ ಕಟ್ಟಡ ಕಾರ್ಮಿಕರಿಗೆ ಮಂಡಳಿ ಅಥವಾ ಸರ್ಕಾರದವತಿಯಿಂದ ಚಿತ್ರದುರ್ಗ ನಗರದಲ್ಲಿ ಎಲ್ಲಾದರು ಒಂದು ಕಡೆ ಜಮೀನು ಖರೀದಿಸಿ ಕಟ್ಟಡ ಕಾರ್ಮಿಕರಿಗೆ 20+30 ರ ಅಳತೆಯ ನಿವೇಶನ ನೀಡಿ ಕಟ್ಟಡ ಕಾರ್ಮಿಕರ ಕಾಲೋನಿ ಎಂದು ಹೆಸರಿಡಬೇಕು. ಚಿತ್ರದುರ್ಗ ಜಿಲ್ಲೆಯು ಬರಪೀಡಿತ ಜಿಲ್ಲೆ ಯಾಗಿರುವುದರಿಂದ ಈ ಮೇಲ್ಕಂಡ ಅಂಶಗಳಿಗೆ ತುರ್ತಾಗಿ ಒತ್ತುಕೊಟ್ಟು ಮಂಜೂರು ಮಾಡಿಕೊಡಲು ಮನವಿ ಮಾಡಲಾಯಿತು.

ಪ್ರತಿಭಟನೆ ನೇತೃತ್ವವನ್ನು ಚಿತ್ರದುರ್ಗ ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷರಾದ ವೈ.ತಿಪ್ಪೇಸ್ವಾಮಿ ವಹಿಸಿದ್ದರು. ಉಪಾಧ್ಯಕ್ಷ ರಾಜಣ್ಣ ಕಾಮನಬಾವಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಗರಾಜು, ತಾಲ್ಲೂಕು ಅಧ್ಯಕ್ಷ ಜಾವೀದ್ ಬಾಷಾ, ಕಾರ್ಯಾಧ್ಯಕ್ಷರಾದ ಟಿ.ಬಸವರಾಜು, ಜಿಲ್ಲಾ ಮಹಿಳಾ ಪ್ರಧಾನ ಕಾರ್ಯದರ್ಶಿ ಲಕ್ಷ್ಮೀದೇವಿ, ಗ್ರಾಮಾಂತರ ಕಾರ್ಯದರ್ಶಿ ತಿಪ್ಪೇಸ್ವಾಮಿ, ತಾಲ್ಲೂಕು ಉಪಾಧ್ಯಕ್ಷ ಮನ್ಸೂರ್ ಬಾಷಾ, ಖಂಜಾಚಿ ಆಶೋಕ್, ಸಹ ಕಾರ್ಯದರ್ಶಿ ರಮೇಶ್, ರಾಜು, ನಾಗೇಶ್, ರಮೇಶ್, ಈರೇಶ್, ಸುರೇಶ್, ನಾಗಭೂಷಣ, ಅಂಜಿನಪ್ಪ, ತಿಪ್ಪೇಸ್ವಾಮಿ, ಚಳ್ಳಕೇರಪ್ಪ, ಹನುಮಂತಪ್ಪ, ಸೇರಿದಂತೆ ಇತರರು ಭಾಗವಹಿಸಿದ್ದರು.

ಫಾಸ್ಟ್ ನ್ಯೂಸ್

ಗೊರ್ಲತ್ತು ಗ್ರಾಮದಲ್ಲಿ ಅಗ್ನಿ ಆಕಸ್ಮಿಕ: 5 ಎಕರೆ ತೆಂಗು, ಅಡಿಕೆ ಸಸಿ ನಾಶ: 1.20 ಲಕ್ಷ ನಷ್ಟ.

» ಚಳ್ಳಕೆರೆ

ತಾಲ್ಲೂಕಿನ ಗೊರ್ಲತ್ತು ಗ್ರಾಮದ ರೈತ ವೀರಣ್ಣ ಎಂಬುವವರು ಜಮೀನಿನಲ್ಲಿ ಭಾನುವಾರ ಮಧ್ಯಾಹ್ನ ಸಂಭವಿಸಿದ ಆಕಸ್ಮಿಕ ಬೆಂಕಿ ಅನಾಹುತದಲ್ಲಿ ಜಮೀನಿನಲ್ಲಿದ್ದ ಬೆಳೆ ಹಾಗೂ ಡ್ರಿಪ್ ಪೈಪ್‌ಗಳು ಸುಟ್ಟು 1.20 ಲಕ್ಷ ನಷ್ಟ ಸಂಭವಿಸಿದೆ. ಅಗ್ನಿ ಆಕಸ್ಮಿಕಕ್ಕೆ ಕಾರಣ ತಿಳಿದುಬಂದಿಲ್ಲವಾದರೂ ಗೊರ್ಲತ್ತು ಸಮೀಪದ ಬೆಳಗೆರೆ ಕಾವಲು ರಿ.ಸರ್ವೆ ನಂ.283/1, 283/2 ಒಟ್ಟು ಐದು ಎಕರೆ ಪ್ರದೇಶದಲ್ಲಿ 1100 ಅಡಿಕೆ, 150 ತೆಂಗಿನ ಸಸಿಗಳನ್ನು ನಾಟಿ ಮಾಡಲಾಗಿತ್ತು. ಆದರೆ, ಭಾನುವಾರ ಮಧ್ಯಾಹ್ನ ಸಂಭವಿಸಿದ ಅಗ್ನಿ ಆಕಸ್ಮಿಕಕ್ಕೆ ಸಂಪೂರ್ಣ ಸುಟ್ಟು ಹೋಗಿ ನಷ್ಟ ಅನುಭವಿಸಿದ್ದಾನೆ. ಕಂದಾಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಉದ್ಯಮಶೀಲತಾ ತರಬೇತಿಗೆ ಅರ್ಜಿ

» ಚಿತ್ರದುರ್ಗ

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 2023–24ನೇ ಸಾಲಿಗೆ ಪರಿಶಿಷ್ಟ ಜಾತಿಯ 50 ಮಹಿಳಾ ಪದವೀಧರರಿಗೆ ಉದ್ಯಮಗಳನ್ನು ಸ್ಥಾಪಿಸಲು ಪೂರಕವಾಗುವಂತೆ ಉದ್ಯಮಶೀಲತಾ ತರಬೇತಿ ನೀಡಲು ಈಗಾಗಲೇ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜ.31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಪ್ರತಿಷ್ಠಿತ ಸಂಸ್ಥೆಯಾದ ಬೆಂಗಳೂರಿನ ಐ.ಐ.ಎಂ ಸಂಸ್ಥೆಯ ಮೂಲಕ ಉದ್ಯಮಶೀಲತಾ ತರಬೇತಿಗಾಗಿ ಆಸಕ್ತರು www.sw.kar.nic.in ಜಾಲತಾಣದ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಈ ತರಬೇತಿಗೆ ಅರ್ಜಿ ಸಲ್ಲಿಸುವವರು ಪರಿಶಿಷ್ಟ ಜಾತಿಗೆ ಸೇರಿದ್ದು, ಕರ್ನಾಟಕದ ನಿವಾಸಿಯಾಗಿರಬೇಕು. ಕನಿಷ್ಠ 21 ವರ್ಷಗಳು, ಗರಿಷ್ಠ 45 ವರ್ಷ ವಯೋಮಿತಿ ಹೊಂದಿರಬೇಕು. 5 ರಿಂದ 6 ತಿಂಗಳು ತರಬೇತಿಯಿದ್ದು, 8 ದಿನ ತರಬೇತಿಯನ್ನು ಐ.ಐ.ಎಂ–ಬೆಂಗಳೂರು ಸಂಸ್ಥೆಯ ಕ್ಯಾಂಪಸ್‌ನಲ್ಲಿ ಒಐಟಿಅ ಮುಖಾಂತರ ನೀಡಲಾಗುವುದು. ಶೇ. 100 ರಷ್ಟು ಹಾಜರಾತಿ ಕಡ್ಡಾಯವಾಗಿದ್ದು, ಫೆಬ್ರವರಿ 11 ರಂದು ಬೆಂಗಳೂರಿನ ಐ.ಐ.ಎಂ ಕ್ಯಾಂಪಸ್‌ನಲ್ಲಿ ಸ್ಕ್ರೀನಿಂಗ್ ಟೆಸ್ಟ್ ನಡೆಸಲಾಗುವುದು.

ಬಿಜೆಪಿ,ಜೆಡಿಎಸ್ ಮೈತ್ರಿ ಮಾಡಿಕೊಂಡಿದ್ದರೂ ಪುಟ್ಟಣ್ಣ ಗೆದ್ದೇ ಗೆಲ್ಲುತ್ತಾರೆ: ಸಿದ್ದರಾಮಯ್ಯ

» ಮೊದಲ ಪುಟದಿಂದ

ಕುಮಾರಸ್ವಾಮಿ ಹಾಗೂ ಬಿಜೆಪಿ ತಪ್ಪು ಎನ್ನುವುದು ಸ್ಪಷ್ಟವಾಗಿದೆ. ಪಂಚಾಯತಿಯಲ್ಲಿ ಧ್ವಜಸ್ತಂಭದ ಮೇಲೆ ರಾಷ್ಟ್ರಧ್ವಜ ಅಥವಾ ಕನ್ನಡ ಧ್ವಜ ಹಾರಿಸಿ ಎಂದು ಅನುಮತಿ ನೀಡಲಾಗಿದೆ. ಈ ಬಗ್ಗೆ ಮುಚ್ಚಳಿಕೆಯನ್ನು ಅವರು ಬರೆದುಕೊಟ್ಟಿದ್ದಾರೆ. ಅದರೊಂದಿಗೆ ಯಾವುದೇ ಪಕ್ಷದ, ಧರ್ಮದ ಧ್ವಜವನ್ನು ಹಾರಿಸಬಾರದು ಎಂದೂ ಕೂಡು ತಿಳಿಸಲಾಗಿದೆ. ಆದರೆ ಇವರು ಭಗವದ್ಧ್ವಜ ಹಾರಿಸಿದ್ದಾರೆ. ಅದರಿಂದ ಅಶಾಂತಿ ನಿರ್ಮಾಣವಾಗುವಂತೆ ಮಾಡಿದ್ದಾರೆ. ಇದರ ಪರವಾಗಿ ಬಂದಿರುವವರು ಹೆಚ್.ಡಿ.ಕುಮಾರಸ್ವಾಮಿ, ಸಿ.ಟಿ.ರವಿಯವರು. ತಪ್ಪು ಯಾರದ್ದು ಹಾಗಾದರೆ ಎಂದು ಪ್ರಶ್ನಿಸಿದರು.

ಖಾಸಗಿಮಿಲ್ ಗುಮಾಸ್ತ ಕುತುಬ್ದಿನ್ ನಿಧನ

» ಚಳ್ಳಕೆರೆ

ನಗರದ ಶಾಂತಿನಗರದ ನಿವಾಸಿ ಖಾಸಗಿ ಮಿಲ್‌ನಲ್ಲಿ ಹಲವಾರು ವರ್ಷಗಳ ಕಾಲ ಸೇವೆ ಸಲ್ಲಿಸಿದ್ದ ಕುತುಬ್ದಿನ್(78) ಮಂಗಳವಾರ ಬೆಳಗ್ಗೆ ಅವರ ಸ್ವಗೃಹದಲ್ಲಿ ವಯೋಸಹಜ ಖಾಯಿಲೆಯಿಂದ ನಿಧನರಾದರು. ಮೃತ ಕುತುಬ್ದಿನ್ ಪತ್ನಿ, ಮೂವರು ಗಂಡು ಮಕ್ಕಳು, ಒಂದು ಹೆಣ್ಣು ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದು. ಇವರ ಅಂತ್ಯಕ್ರಿಯೆ ಬೆಂಗಳೂರು ರಸ್ತೆಯ ಕಬರ್‌ಸ್ಥಾನ್‌ದಲ್ಲಿ ಮಂಗಳವಾರ ಸಂಜೆ ನಡೆಯಿತು.

ಸೂರಗೊಂಡನಕೊಪ್ಪದಲ್ಲಿ ಫೆ.13ರಿಂದ 3 ದಿನಗಳ ಕಾಲ ಸೇವಾಲಾಲ್ ಜಯಂತಿ

ಸಂತ ಸೇವಾಲಾಲ್ ಮಹಾರಾಜರ 285 ನೇ ಜಯಂತಿ, ಎಲ್ಲಾ ಸಿದ್ಧತೆಗಳನ್ನು ಕೈಗೊಳ್ಳಲು ಉಪ ಸಭಾಪತಿ ಹಾಗೂ ಸಂತಸೇವಾಲಾಲ್ ಮಹಾಮಠದ ಸಮಿತಿ ಅಧ್ಯಕ್ಷರಾದ ರುದ್ರಪ್ಪ ಲಮಾಣಿ

» ದಾವಣಗೆರೆ

ಸಂತ ಸೇವಾಲಾಲ್ ಮಹಾರಾಜರು ಹುಟ್ಟಿದ ನ್ಯಾಮತಿತಾಲ್ಲೂಕಿನಸೂರಗೊಂಡನಕೊಪ್ಪದಲ್ಲಿ ಸಂತ ಸೇವಾಲಾಲ್ ಮಹಾರಾಜರ 285 ನೇ ಜಯಂತಿಯನ್ನು ಫೆಬ್ರವರಿ 13, 14 ಹಾಗೂ 15 ರಂದು ನಡೆಯಲಿದ್ದು ಇದಕ್ಕೆ ಬೇಕಾದ ಎಲ್ಲಾ ಸಿದ್ಧತೆಗಳನ್ನು ಕೈಗೊಳ್ಳುವಂತೆ ಉಪ ಸಭಾಪತಿಗಳು ಹಾಗೂ ಸಂತ ಸೇವಾಲಾಲ್ ಮಹಾಮಠ ಸಮಿತಿ ಅಧ್ಯಕ್ಷರಾದ ರುದ್ರಪ್ಪ ಲಮಾಣಿಯವರು ತಿಳಿಸಿದರು.

ಅವರುಸೋಮವಾರಸೂರಗೊಂಡನಕೊಪ್ಪ ಮಹಾಮಠದಲ್ಲಿ ನಡೆದ ಸೇವಾಲಾಲ್ ಜಯಂತಿಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಂತ ಸೇವಾಲಾಲ್ ಮಹಾರಾಜರು ಹುಟ್ಟಿದ ಕ್ಷೇತ್ರ ಸೂರಗೊಂಡನಕೊಪ್ಪದಲ್ಲಿ ರಾಜ್ಯ ಮಟ್ಟದ ಜಯಂತಿ ಕಾರ್ಯಕ್ರಮವನ್ನು ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ಸಂತ ಸೇವಾಲಾಲ್ ಕ್ಷೇತ್ರಾಭಿವೃದ್ಧಿ ಮತ್ತು ನಿರ್ವಹಣಾ ಪ್ರತಿಷ್ಠಾನದ ಸಹಯೋಗದಲ್ಲಿ ಜಯಂತಿಯನ್ನು 3 ದಿನಗಳ ಕಾಲ ಆಚರಿಸಲಾಗುತ್ತದೆ. ಈ ಕಾರ್ಯಕ್ರಮದಲ್ಲಿ ರಾಜ್ಯದ ಇತರೆ ಜಿಲ್ಲೆ ಹಾಗೂ ಹೊರ ರಾಜ್ಯಗಳಿಂದ ಭಕ್ತರು ಆಗಮಿಸಲಿದ್ದು ಶ್ವೇತವಸ್ತ್ರ ಮಾಲಾಧಾರಿಗಳು ಭಾಗವಹಿಸಲಿದ್ದು 3 ಲಕ್ಷಕ್ಕೂ ಹೆಚ್ಚು ಭಕ್ತರು ಈ ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸುವರು. ಲಕ್ಷಾಂತರ ಭಕ್ತಾಧಿಗಳು ಭಾಗವಹಿಸುವುದರಿಂದ ಇಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕಾಗಿದೆ. ಆಗಮಿಸುವ ಭಕ್ತಾಧಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ, ವಾಹನ ನಿಲುಗಡೆ, ಸುಗಮ ಸಂಚಾರ, ಆರೋಗ್ಯ ಮತ್ತು ನೈರ್ಮಲ್ಯತೆ ಕಾಪಾಡುವುದು, ವೇದಿಕೆ ನಿರ್ಮಾಣ, ಆಸನದ ವ್ಯವಸ್ಥೆ, ಪ್ರಸಾದ ವ್ಯವಸ್ಥೆ ಸೇರಿದಂತೆ ಸ್ನಾನ ಮತ್ತು ಶೌಚಾಲಯದ ವ್ಯವಸ್ಥೆಯನ್ನು ತುಂಬ ಅಚ್ಚುಕಟ್ಟಾಗಿ ನೆರವೇರಿಸಬೇಕಾಗಿದೆ. ಮತ್ತು ಆರೋಗ್ಯ ಕಾಪಾಡುವ ದೃಷ್ಟಿಯಿಂದ ಆರೋಗ್ಯ ಘಟಕಗಳ ಸ್ಥಾಪನೆ, ಸೂಕ್ತ ಬಂದೋಬಸ್ತ್ ವ್ಯವಸ್ಥೆ ಹಾಗೂ ಇನ್ನಿತರೆ ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಯಾಗಿ ನೆರವೇರಿಸಲು ಅಧಿಕಾರಿಗಳನೇತೃತ್ವದಲ್ಲಿವಿವಿಧಸಮಿತಿಗಳನ್ನು ರಚಿಸಲಾಗಿದ್ದು ಎಲ್ಲರೂ ಅಚ್ಚುಕ್ಕಾಗಿ ಕೆಲಸ ಮಾಡಬೇಕೆಂದರು. ಫೆಬ್ರವರಿ 14 ರಂದು ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗುವರು ಮತ್ತು ಉಪಮುಖ್ಯಮಂತ್ರಿ, ಸಚಿವರು ಸೇರಿದಂತೆ ಅನೇಕ ಗಣ್ಯರು ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಸಭೆಯಲ್ಲಿ ಶಾಸಕರಾದ ಡಿ.ಜಿ.ಶಾಂತನಗೌಡ, ಕೆ.ಎಂ.ಎಫ್ ಅಧ್ಯಕ್ಷರಾದ ಭೀಮಾನಾಯ್ಕ್, ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ, ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್, ತಾಂಡ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಶಿವಶಂಕರ್‌ನಾಯ್ಕ್, ಸಮಿತಿ ಕಾರ್ಯದರ್ಶಿ ಅರುಣ್‌ಕುಮಾರ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಕೆ.ನಾಗರಾಜ್‌ಉಪಸ್ಥಿತರಿದ್ದರು.

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯ ಜವಾಬ್ದಾರಿಯಲ್ಲಿ ಪೋಷಕರ ಪಾತ್ರ ಗಮನಾರ್ಹ: ಶಾಸಕ

» ಚಳ್ಳಕೆರೆ

ಗ್ರಾಮೀಣ ಭಾಗಗಳಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಗುರಿಯ ಜವಾಬ್ದಾರಿಯನ್ನು ವಿದ್ಯಾರ್ಥಿಗಳ ಪೋಷಕರೂ ಸಹ ಹೊರಬೇಕಾಗುತ್ತದೆ. ಕಾಲೇಜಿನಲ್ಲಿ ಉಪನ್ಯಾಸಕರು ಉತ್ತಮ ಶಿಕ್ಷಣ ನೀಡಿದರೂ ಸಹ ಕೆಲವು ಸಂದರ್ಭದಲ್ಲಿ ವಿದ್ಯಾರ್ಥಿಗಳ ನಿರ್ಲಕ್ಷ್ಯದಿಂದ ಶೈಕ್ಷಣಿಕ ಪ್ರಗತಿ ಕುಂಠಿತವಾಗುತ್ತದೆ. ಆದ್ದರಿಂದ ವಿದ್ಯಾರ್ಥಿಗಳು ಹಾಗೂ ಪೋಷಕರು ಸಮಾನ ರೀತಿಯಲ್ಲಿ ಜವಾಬ್ದಾರಿ ಅರಿತು ಶಿಕ್ಷಣದ ಪ್ರಗತಿಗೆ ಶ್ರಮಿಸಬೇಕೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು. ಅವರು, ಪಶುರಾಮಪುರದ ಸರ್ಕಾರಿ ಪದವಿಪೂರ್ವ ಕಾಲೇಜಿನ ಎನ್‌ಎಸ್‌ಎಸ್ ಶಿಬಿರ ಸಮಾರೋಪ ಸಮಾರಂಭ ಹಾಗೂ ದ್ವಿತೀಯ ಪಿಯು ವಿದ್ಯಾರ್ಥಿಗಳ ಬೀಳ್ಕೊಡಿಗೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. ಎನ್‌ಎಸ್‌ಎಸ್ ಶಿಬಿರಗಳು ವಿದ್ಯಾರ್ಥಿಗಳ ಕ್ರಿಯಾಶೀಲತೆಯನ್ನು ಹೆಚ್ಚುತ್ತವೆ. ಉತ್ತಮ ಅಭ್ಯಾಸ ಮಾಡಿದವನಿಗೆ ಪರೀಕ್ಷೆಯ ಸಂದರ್ಭದಲ್ಲೂ ಕಠಿಣವಾಗದು ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದಪ್ರಾಚಾರ್ಯ ನಿಂಗರಾಜು ಮಾತನಾಡಿ, ಪ್ರತಿವರ್ಷವೂ ಕಾಲೇಜಿನ ಫಲಿತಾಂಶದಲ್ಲಿ ಬದಲಾವಣೆಯಾಗುತ್ತಾ ಬಂದಿದೆ. ಬೋಧಕ ಸಿಬ್ಬಂದಿ ವರ್ಗ ಪ್ರತಿಹಂತದಲ್ಲೂ ವಿದ್ಯಾರ್ಥಿಗಳ ಶಿಕ್ಷಣದ ಬಗ್ಗೆ ಹೆಚ್ಚು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸುತ್ತಾ ಬಂದಿದೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ಪರಿಶ್ರಮ ಮತ್ತು ವಿನಯದಿಂದವಿದ್ಯೆ ಕಲಿಯಬೇಕಿದೆ. ನಿಮ್ಮ ಭವಿಷ್ಯವನ್ನು ನೀವೇ ರೂಪಿಸಿಕೊಳ್ಳುವಷ್ಟು ಸಮರ್ಥರಾಗಬೇಕು ಎಂದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಜಗಲೂರಸ್ವಾಮಿ, ಸದಸ್ಯರಾದ ರುದ್ರೇಶ್, ನಾಗಭೂಷಣ್, ಪ್ರಕಾಶ್, ಓಬಳೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ಕಾಂಗ್ರೆಸ್ ಮುಖಂಡ ಜಯವೀರಚಾರಿ ಉಪಸ್ಥಿತರಿದ್ದರು.

ಲೋಕಸಭಾ ಚುನಾವಣೆಯಲ್ಲಿ ಕಾ

ಸ್ಪರ್ಶ್ ಕುಷ್ಠರೋಗ ಜಾಗೃತಿ ಜಾಥಾಕ್ಕೆ ಚಾಲನೆ

» ಚಿತ್ರದುರ್ಗ

"ಕಳಂಕ ಕೊನೆಗೊಳಿಸಿ, ಘನತೆಯನ್ನು ಎತ್ತಿ ಹಿಡಿಯಿರಿ" ಎಂಬ ಘೋಷಣೆಯೊಂದಿಗೆ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ ಜಾಥಾ ಕಾರ್ಯಕ್ರಮಕ್ಕೆ ಮಂಗಳವಾರ ಚಾಲನೆ ನೀಡಲಾಯಿತು.

ಜಿಲ್ಲಾ ಕುಷ್ಠರೋಗ ನಿವಾರಣಾಧಿಕಾರಿ ಡಾ. ಜಿ.ಓ.ನಾಗರಾಜ್ ಅವರು ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಇದೇ ಜ.30 ರಿಂದ ಫೆ.13 ರವರೆಗೆ 15 ದಿನಗಳ ಕಾಲ ಸ್ಪರ್ಶ್ ಕುಷ್ಠರೋಗ ಜಾಗೃತಿ ಆಂದೋಲನ ನಡೆಯಲಿದೆ. ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ ಜಿಲ್ಲೆಯಾದ್ಯಂತ ಕುಷ್ಠರೋಗ ನಿರ್ಮೂಲನೆ ಮಾಡುವ ಗುರಿಯನ್ನು ಹೊಂದಲಾಗಿದೆ ಎಂದರು.

ಜಿಲ್ಲೆಯಲ್ಲಿ ಈಗಾಗಲೇ 58 ಕುಷ್ಠರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಪ್ರತಿ 10 ಸಾವಿರ ಜನಸಂಖ್ಯೆ 1 ಪ್ರಕರಣಕ್ಕಿಂತ ಕಡಿಮೆ ಪ್ರಕರಣ ಕಂಡು ಬಂದರೆ ಕುಷ್ಠ ರೋಗ ನಿರ್ಮೂಲನೆ ಆದಂತೆ, ಕುಷ್ಠ ರೋಗದಿಂದ ಆಗುವ ಅಂಗವಿಲಕತೆ ಕಡಿಮೆ ಮಾಡುವುದು, ಇದಕ್ಕೆ ತುತ್ತಾದ ಜನರಿಗೆ ವೈದ್ಯಕೀಯ ವ್ಯವಸ್ಥೆ ಕಲ್ಪಿಸುವುದು ಸಹ ಮುಖ್ಯವಾಗಿದೆ ಎಂದು ತಿಳಿಸಿದರು.

ಕುಷ್ಠರೋಗ ಕುರಿತು ಸಮಾಜದಲ್ಲಿರುವ ಕೀಳರಿಮೆ ಹೋಗಲಾಡಿಸಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಕಾರ್ಯಕ್ರಮ ರೂಪಿಸಬೇಕಾಗಿದೆ. ಈ ಬಾರಿ ಕುಷ್ಠರೋಗ ಜಾಗೃತಿ ಆಂದೋಲನದ ಘೋಷಣಾ ವಾಕ್ಯ ಕಳಂಕವನ್ನು ಕೊನೆಗೊಳಿಸಿ ಘನತೆಯನ್ನು ಎತ್ತಿ ಹಿಡಿಯೋಣ ಎಂಬುದಾಗಿದೆ. ಈ ಆಂದೋಲನ ಎಲ್ಲ ಸಮುದಾಯಗಳನ್ನು ಒಗ್ಗೂಡಿಸಿ ಕುಷ್ಠರೋಗದ ಬಗ್ಗೆ ಅರಿವು ಮೂಡಿಸಿ ರೋಗವನ್ನು ಶೀಘ್ರ ಪತ್ತೆಹಚ್ಚುವ ಮೂಲಕ ಅಂಗವಿಕಲತೆ ಕಡಿಮೆ ಮಾಡುವುದು ಪ್ರಮುಖವಾಗಿದೆ ಎಂದರು.ಆಂದೋಲನದ ಅಂಗವಾಗಿ ಗ್ರಾಮಗಳಲ್ಲಿ ಜನರಿಗೆ ಮಾಹಿತಿ ಶಿಕ್ಷಣ ಸಮೂಹ ಚಟುವಟಿಕೆ, ಗ್ರಾಮ ಸಭೆ, ಶಾಲಾ, ಕಾಲೇಜುಗಳಲ್ಲಿ ಸ್ವಸಹಾಯ ಸಂಘಗಳ ಮಹಿಳೆಯರಿಗೆ ಜಾಗೃತಿಯನ್ನು ಮೂಡಿಸುವುದು ಇದರ ಉದ್ದೇಶವಾಗಿದೆ. ಆಂದೋಲನದ ಯಶಸ್ವಿಗೆ ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿ, ಗ್ರಾಮ ಪಂಚಾಯಿತಿಗಳು, ಶಿಕ್ಷಣ, ಸಮಾಜ ಕಲ್ಯಾಣ ಇಲಾಖೆ ವಿವಿಧ ಇಲಾಖೆಗಳ ಸಮನ್ವಯ ಸಾಧಿಸುವುದು ಮುಖ್ಯವಾಗಿದೆ ಎಂದು ತಿಳಿಸಿದರು.

ಜಾಗೃತಿ ಜಾಥಾವು ನಗರದ ಜಿಲ್ಲಾ ಆಸ್ಪತ್ರೆ ಆವರಣದಿಂದ ಪ್ರವಾಸಿ ಮಂದಿರ ಮೂಲಕ ಸಾಗಿ ಜಿಲ್ಲಾಧಿಕಾರಿಗಳ ಕಚೇರಿಯ ಒನಕೆ ಓಬವ್ವ ವೃತ್ತದಲ್ಲಿ ಬೃಹತ್ ಮಾನವ ಸರಪಳಿ ನಿರ್ಮಿಸಿ ಘೋಷಣೆ ಕೂಗುತ್ತಾ ನಂತರ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಸಮಾಪ್ತಿಗೊಂಡಿತು. ಜಾಥಾ ಕಾರ್ಯಕ್ರಮದಲ್ಲಿ ಆಶಾ ಕಾರ್ಯಕರ್ತೆಯರು, ಜಿಎನ್‌ಎಂ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಇದ್ದರು.

ಈ ಸಂದರ್ಭದಲ್ಲಿ ಜಿಲ್ಲಾ ಕ್ಷಯ ರೋಗ ನಿಯಂತ್ರಣಾಧಿಕಾರಿ ಡಾ. ಸಿ. ಓ.ಸುಧಾ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ. ಗಿರೀಶ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣ ನಾಯ್ಕ, ಜಿಲ್ಲಾ ಆರೋಗ್ಯ ಮೇಲ್ವಿಚಾರಕ ಎಂ. ಬಿ. ಹನುಮಂತಪ್ಪ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಮೂಗಪ್ಪ, ಡಿ.ಎನ್ ಟಿ ತಂಡದ ಮೇಲ್ವಿಚಾರಕರಾದ ಎಂ. ಚಂದ್ರಪ್ಪ, ವೈ. ತಿಪ್ಪೇಶ್, ಕೆ. ರಾಜೇಂದ್ರ ಪ್ರಸಾದ್, ಯು. ಕಿರಣ್, ಟಿ, ಮಂಜುನಾಥ್ ಇದ್ದರು.

ಫಾಸ್ಟ್ ನ್ಯೂಸ್

ಬ್ಯಾಟರಿ ಚಾಲಿತ ವೀಲ್‌ಚೇರ್: ದೈಹಿಕ ವಿಕಲಚೇತನರಿಂದ ಅರ್ಜಿ

» ಚಿತ್ರದುರ್ಗ

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಪ್ರಸಕ್ತ ಸಾಲಿನಲ್ಲಿ 15 ವರ್ಷ ಮೇಲ್ಪಟ್ಟ ವಯಸ್ಸಿನ ದೈಹಿಕ ವಿಕಲಚೇತನರಿಗಾಗಿ ಬ್ಯಾಟರಿ ಚಾಲಿತ ವೀಲ್‌ಚೇರ್ ಪಡೆಯಲು ಅರ್ಜಿ ಆಹ್ವಾನಿಸಲಾಗಿದ್ದು, ಫೆಬ್ರವರಿ 10 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಈ ಯೋಜನೆಯಡಿ ಪ್ರಯೋಜನ ಪಡೆಯಲು 15 ವರ್ಷ ಮೇಲ್ಪಟ್ಟ ವಯಸ್ಸಿನ ದೈಹಿಕ ವಿಕಲಚೇತನರು ಕಡ್ಡಾಯವಾಗಿ ವಿಕಲಚೇತನರ ವಿಶಿಷ್ಟ ಗುರುತಿನ ಚೀಟಿ (ಯುಡಿಐಡಿ), ವೈದ್ಯಕೀಯ ಪ್ರಮಾಣಪತ್ರ (ಶೇ.75ಕ್ಕಿಂತ ಹೆಚ್ಚಿನ ದೈಹಿಕ ವಿಕಲತೆ ಇರುವವರಿಗೆ ಮಾತ್ರ), ಇತ್ತೀಚಿನ ಆದಾಯ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ಆಧಾರ ಕಾರ್ಡ್ ಮತ್ತು ಮತದಾರರ ಗುರುತಿನ ಚೀಟಿ, ನಿವಾಸಿ ದೃಢೀಕರಣ ಪತ್ರ, ಯಂತ್ರಚಾಲಿತ ದ್ವಿಚಕ್ರ ವಾಹನ ಪಡೆಯದಿರುವ ಬಗ್ಗೆ ರೂ.20/– ಗಳ ಛಾಪಕಾಗದದಲ್ಲಿ ನೋಟರಿ ದೃಢೀಕರಣ ಹಾಗೂ ಇತ್ತೀಚಿನ ಭಾವಚಿತ್ರದೊಂದಿಗೆ ಅರ್ಜಿ ಸಲ್ಲಿಸಬೇಕು. ಈಗಾಗಲೆ ಯಂತ್ರಚಾಲಿತ ದ್ವಿಚಕ್ರ ವಾಹನ ಪಡೆದಿರುವ ವಿಕಲಚೇತನರು ಈ ಯೋಜನೆಗೆ ಅರ್ಜಿ ಸಲ್ಲಿಸಲು ಅರ್ಹರಲ್ಲ. ಅರ್ಜಿ ನಮೂನೆಯನ್ನು www.dwdsc.kar.nic.in ವೆಬ್‌ಸೈಟ್‌ನಿಂದ ನೇರವಾಗಿ ಡೌನ್‌ಲೋಡ್ ಮಾಡಿಕೊಳ್ಳಬಹುದು. ಅಥವಾ ಜಿಲ್ಲಾ ಕಚೇರಿಯಲ್ಲಿ ಹಾಗೂ ತಾಲ್ಲೂಕು ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರಿಂದ/ ಗಾಪಂ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ನಗರ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನಗರ ಪುನರ್ವಸತಿ ಕಾರ್ಯಕರ್ತರುಗಳನ್ನು ಸಂಪರ್ಕಿಸಿ ಪಡೆಯಬಹುದು. ಮಾಹಿತಿಗಾಗಿ ಎಂಆರ್‌ಡಬ್ಲ್ಯೂಗಳ ದೂರವಾಣಿ ಸಂಖ್ಯೆ ಚಿತ್ರದುರ್ಗ–9880821934, ಚಳ್ಳಕೆರೆ–9611266930, ಹಿರಿಯೂರು–9902888901, ಹೊಳಲ್ಕೆರೆ–9740030227, ಹೊಸದುರ್ಗ–9741829990, ಮೊಳಕಾಲ್ಮುರು–9742725576 ಕ್ಕೆ ಸಂಪರ್ಕಿಸಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳ ಕಚೇರಿ, ಬಾಲಭವನ ಆವರಣ, ಸ್ಟೇಡಿಯಂ ಹತ್ತಿರ, ಚಿತ್ರದುರ್ಗ ದೂರವಾಣಿ ಸಂಖ್ಯೆ 08194–235284 ಅನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ವಿದ್ಯುತ್ ಗೋಪುರ ಮುಟ್ಟದಂತೆ ಸೂಚನೆ

» ಚಿತ್ರದುರ್ಗ

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು ತಾಲ್ಲೂಕಿನ

ಹಾನಗಲ್ 66/11 ಕೆವಿ ವಿದ್ಯುತ್ ಕೇಂದ್ರದಿಂದ ರಾಂಪುರ 66/11 ಕೆವಿ ವಿದ್ಯುತ್ ಕೇಂದ್ರದವರೆಗೆ 27.10ಕಿ.ಮೀ 66ಕೆವಿ ಜೋಡಿ ಗೋಪುರದಲ್ಲಿ ಕಯೋಟ್ ವಾಹಕ ಬಳಸಿ ಒಂಟಿ ವಿದ್ಯುತ್ ಪ್ರಸರಣ ಮಾರ್ಗ ಹಾಗೂ ನಾಗಸಮುದ್ರ 66/11ಕೆವಿ ಉಪಕೇಂದ್ರಕ್ಕೆ ಲಿಲೋ ಮಾರ್ಗ ಮತ್ತು ರಾಂಪುರ 66ಕೆವಿ ವಿದ್ಯುತ್ ಉಪಕೇಂದ್ರದಲ್ಲಿ ಒಂದು ಸಂಖ್ಯೆಯ 66ಕೆವಿ ಟರ್ಮಿನಲ್ ಬೇ ನಿರ್ಮಾಣ, ಹಾನಗಲ್ 66/11ಕೆವಿ ವಿದ್ಯುತ್ ಒಂದು ಸಂಖ್ಯೆಯ 66ಕೆವಿ ಟರ್ಮಿನಲ್, ನಾಗಸಮುದ್ರ 66/11ಕೆವಿ ವಿದ್ಯುತ್ ಉಪಕೇಂದ್ರದಲ್ಲಿ ಎರಡು ಸಂಖ್ಯೆಯ 66ಕೆವಿ ಟರ್ಮಿನಲ್ ಬೇಗಳ ನಿರ್ಮಾಣವು ಮುಕ್ತಾಯಗೊಂಡಿರುತ್ತದೆ. ಈ 66ಕೆವಿ ವಿದ್ಯುತ್ ಮಾರ್ಗವನ್ನು ಇದೇ ಜನವರಿ 30ರಂದು ಅಥವಾ ತದನಂತರ ಚೇತನಗೊಳಿಸುತ್ತಿರುವುದರಿಂದ ಈ 66 ಕೆವಿ ಪ್ರಸರಣ ಮಾರ್ಗದ ವಿದ್ಯುತ್ ಗೋಪುರಗಳನ್ನು ಸಾರ್ವಜನಿಕರು ಮುಟ್ಟುವುದಾಗಲಿ,ಹತ್ತುವುದಾಗಲಿ, ಮರದ ರಂಬೆ, ಲೋಹದ ತಂತಿಗಳನ್ನು ಹಾಗೂ ಇತರೆ ಯಾವುದೇ ವಸ್ತುಗಳನ್ನು ಮಾರ್ಗದ ಮೇಲೆ ಎಸೆಯುವುದಾಗಲಿ ಮತ್ತು ವಿದ್ಯುತ್ ಗೋಪುರಗಳಿಗೆ ಜಾನುವಾರುಗಳನ್ನು ಕಟ್ಟುವುದಾಗಲಿ ಮಾಡಬಾರದು ಎಂದು ಸಾರ್ವಜನಿಕರಿಗೆ ಎಚ್ಚರಿಕೆ ನೀಡಲಾಗುತ್ತಿದೆ.ವಿದ್ಯುತ್ ಮಾರ್ಗದ ಮೊಗಸಾಲೆಯಲ್ಲಿ ಅಪಾಯದ ಮಟ್ಟದಲ್ಲಿರುವ ಮರಗಳನ್ನು ಸುರಕ್ಷತೆಯ ದೃಷ್ಟಿಯಿಂದ ತೆಗೆದು ಹಾಕಲು ನಿಗಮದ ನಿಯಾಮಾನುಸಾರ ಸೂಕ್ತ ಪರಿಹಾರ ಪಡೆದುಕೊಂಡು ಮರಗಳನ್ನು ತೆಗೆಯದೇ ಇರುವ ಭೂ ಮಾಲೀಕರು ಕೂಡಲೇ ಮಾರ್ಗದ ಮೊಗಸಾಲೆಯಲ್ಲಿ ಇರುವ ಮರಗಳನ್ನು ಕಡಿದು ಹಾಕಲು ಅನುಮತಿ ನೀಡುವುದು. ಒಂದು ವೇಳೆ ಈ ಎಚ್ಚರಿಕೆ ಉಲ್ಲಂಘಿಸಿದ್ದಲ್ಲಿ ಮೇಲೆ ತಿಳಿಸಿದ ವಿದ್ಯುತ್ ಮಾರ್ಗದಿಂದ ಸಾರ್ವಜನಿಕರಿಗೆ ಆಗುವ ಹಾನಿ, ತೊಂದರೆ, ಅಪಘಾತಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಜವಾಬ್ದಾರಿಯಾಗಿರುವುದಿಲ್ಲ.

ವಿದ್ಯುತ್ ಮಾರ್ಗ ಹಾದುಹೋಗುವ ಪ್ರದೇಶಗಳು: ಹಾನಗಲ್, ಯರಜೇನಹಳ್ಳಿ, ಕೊಮ್ಮನಪಟ್ಟಿ, ಮೇಗಳಹಟ್ಟಿ, ಕೆಳಗಳಹಟ್ಟಿ, ಕಾಟನಾಯಕನಹಳ್ಳಿ, ಗುಡ್ಡದಹಳ್ಳಿ, ಬೈರಾಪುರ, ನಾಗಸಮುದ್ರ, ಹೆರೂರು, ತೆಂಗಿನಗೌರಸಮುದ್ರ, ರಾಮಸಾಗರ, ದೇವಸಮುದ್ರ, ಕೆರೆಕೊಂಡಪುರ ಮತ್ತು ರಾಂಪುರ ಗ್ರಾಮಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಮಾರ್ಗ ಹಾದುಹೋಗಲಿದೆ ಎಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಚಿತ್ರದುರ್ಗ ಬೃಹತ್ ಕಾಮಗಾರಿ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

ಚಳ್ಳಕೆರೆ ತಾಲ್ಲೂಕಿನ ಪರಶುರಾಮಪುರ ಹೋಬಳಿ ಪುರ್ಲಹಳ್ಳಿ ವಸಲುದಿನ್ನೆಯಲ್ಲಿ ನಡೆದ ಕೇತಪ್ಪ ಜಾತ್ರೆಯಲ್ಲಿ ದೇವರ ದರ್ಶನ ಪಡೆದ ಶಾಸಕ ಟಿ.ರಘುಮೂರ್ತಿ. ಹೆಚ್ಚುವರಿ ಎಸ್ಪಿ ಕುಮಾರಸ್ವಾಮಿ, ತಹಶೀಲ್ದಾರ್ ರೇಹಾನ್‌ಪಾಷ, ಇಒ ಶಶಿಧರ, ರಾಜ್ಯಾಧ್ಯಕ್ಷ ರಾಜಣ್ಣ, ರವಿಕುಮಾರ್, ಶಶಿಧರ, ನೇರ್ಲಗುಂಟೆರಾಮಪ್ಪ ಮೊದಲಾದವರು ಇದ್ದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿಯ ಸಂಚಾಲಕ ಎಸ್.ಲಿಂಗಮೂರ್ತಿಗೆ ಸನ್ಮಾನ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸಂಚಾಲಕರಾಗಿ ನೇಮಕಗೊಂಡಿರುವ ಎಸ್.ಲಿಂಗಮೂರ್ತಿ ಸೋಮವಾರ ಬಿಜೆಪಿ. ಪಕ್ಷದ ಕಚೇರಿಗೆ ಭೇಟಿ ನೀಡಿದಾಗ ಜಿಲ್ಲಾಧ್ಯಕ್ಷ ಎ.ಮುರಳಿ ಶಾಲು ಹೊದಿಸಿ ಸನ್ಮಾನಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಎಸ್.ಲಿಂಗಮೂರ್ತಿ ಸದ್ಯದಲ್ಲೆ ಎದುರಾಗಲಿರುವ ಪಾರ್ಲಿಮೆಂಟ್ ಚುನಾವಣೆಗೆ ಪಕ್ಷದ ಕಾರ್ಯಕರ್ತರು ಈಗಿನಿಂದಲೆ ತಯಾರಾಗಿ ಪ್ರತಿ ಬೂತ್ ಮಟ್ಟದಲ್ಲಿ ಪಕ್ಷವನ್ನು ಬಲಪಡಿಸಬೇಕು. ದೇಶದಲ್ಲಿ ಬಿಜೆಪಿ. ವಾತಾವರಣವಿರುವುದರಿಂದ ಪ್ರಧಾನಿ ಮೋದಿರವರು ನೀಡಿರುವ ಮಹಾತ್ವಾಕಾಂಕ್ಷಿ ಯೋಜನೆಗಳನ್ನು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಕಾರ್ಯಕರ್ತರು ಪ್ರಾಮಾಣಿಕವಾಗಿ ಶ್ರಮಿಸುವಂತೆ ಸೂಚಿಸಿದರು.

ಅಯೋಧ್ಯೆಯಲ್ಲಿ ಶ್ರೀರಾಮನ ಮಂದಿರ ಉದ್ಘಾಟಿಸಿರುವ ಪ್ರಧಾನಿ ಮೋದಿ ಹಿಂದೂಗಳ ಐದು ನೂರು ವರ್ಷಗಳ ಕನಸನ್ನು ನನಸು ಮಾಡಿ ಇಡಿ ಪ್ರಪಂಚವೆ ಭಾರತದತ್ತ ತಿರುಗಿ ನೋಡುವಂತೆ ಮಾಡಿದ್ದಾರೆ. ಹಾಗಾಗಿ 2024 ರ ಲೋಕಸಭಾ ಚುನಾವಣೆಯಲ್ಲಿ ನರೇಂದ್ರಮೋದಿ ಮತ್ತೆ ಪ್ರಧಾನಿಯಾಗಬೇಕಾಗಿರುವುದರಿಂದ ಕಾರ್ಯಕರ್ತರು ಪಕ್ಷದ ಗೆಲುವಿಗೆ ಟೊಂಕ ಕಟ್ಟಿ ನಿಲ್ಲಬೇಕು ಎಂದು ತಾಕೀತು ಮಾಡಿದರು.

ಡಾ.ಸಿದ್ದಾರ್ಥ ಗುಂಡಾರ್ಪಿ, ನರೇಂದ್ರ ಹೊನ್ನಾಳ್, ಶಿವಣ್ಣ, ಸುರೇಶ್‌ಸಿದ್ದಾಪುರ, ಜಿಲ್ಲೆಯ ಎಲ್ಲಾ ಮಂಡಲ ಅಧ್ಯಕ್ಷರು, ಪದಾಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಸಾರ್ವಜನಿಕರ ಸಮಸ್ಯೆಗೆ ಶಾಸಕ ಬಸವರಾಜು ಸ್ಪಂದನೆ

ಚನ್ನಗಿರಿ : ಕ್ಷೇತ್ರದ ಜನರ ಸಮಸ್ಯೆ ಯಾವುದೇ ಇರಲಿ ಅದನ್ನು ಬಗೆಹರಿಸಲಾಗುವುದು ಎಂದು ಶಾಸಕ ಬಸವರಾಜು ವಿ ಶಿವಗಂಗಾ ತಿಳಿಸಿದರು. ಬೊಮ್ಮೇನಹಳ್ಳಿಯಲ್ಲಿ ನಡೆದ ಜನತಾ ದರ್ಶನ ಕಾರ್ಯಕ್ರಮ ಉದ್ಘಾಟನೆ ಮಾಡಿ ಮಾತನಾಡಿದ ಅವರು ಜನರ ಸಮಸ್ಯೆಗಳನ್ನ ತಿಳಿಯಲೆಂದೇ ಈ ಜನತಾ ದರ್‌ಶನ ಕಾರ್ಯಕ್ರ ಹಮ್ಮಿಕೊಳ್ಳಲಾಗಿದೆ.ನಿಮ್ಮ ಮನೆ ಬಾಗಿಲಿಗೆ ಬಂದು ನಿಮ್ಮ ಸಮಮ್ಯೆಗಳಿಗೆ ಪರಿಹಾರ ನಿಡಲಾಗುವುದು ಎಂದು ಶಾಸಕ ಬಸವರಾಜು ವಿ ಶಿವಗಂಗಾ ತಿಳಿಸಿದರು. ಸ್ಥಳೀಯ ಸಮಸ್ಯೆಗಳಿಗೆ ಪರಿಹಾರ ನಿಡುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ. ಯಾವ ಸಮಸ್ಯೆ ಇದ್ದರೂ ಅದನ್ನ ನನ್ನ ಗಮನಕ್ಕೆ ತನ್ನಿ ಎಂದರು. ತಾಲ್ಲೂಕಿನ ಸಮಗ್ರ ಅಭಿವೃದ್ಧಿಗೆ ನಮ್ಮ ಸರ್ಕಾರ ಬದ್ಧವಾಗಿದೆ, ಕೊಟ್ಟ ಐದು ಗ್ಯಾರಂಟಿಗಳನ್ನ ಜಾರಿಗೆ ತರಲಾಗಿದೆ.

ಬುದ್ಧನ ಮಾನವೀಯತೆಯ ರೂಪ ದ್ವಾರಕನಾಥ್

» ಚಿತ್ರದುರ್ಗ

ಬುದ್ಧನ ಮಾನವೀಯತೆ ಬಸವ,ಅಂಬೇಡ್ಕರ್‌ರವರ ಸಮಾನತೆಯಿಂದಾಗಿ ನಾವು ಇಲ್ಲಿದ್ದೇವೆ ಎಂದು ಸಿ.ಎಸ್.ದ್ವಾರಕನಾಥ್ ಹೇಳಿದರು.

ನಗರದ ಹೊರ ವಲಯದಲ್ಲಿರುವ ಭೋವಿ ಗುರುಪೀಠದಲ್ಲಿ ಹಮ್ಮಿಕೊಂಡಿದ್ದ ಎಸ್.ಜೆ.ಎಸ್ ಜ್ಞಾನ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಮೊಟ್ಟ ಮೊದಲಿಗೆ ಸಮಾನತೆ, ಸಹೋದರತೆ, ಸಹಭಾಳ್ವೆಯ ದಾಖಲೆಗಳನ್ನ ಮ್ಯಾಗ್ನಾಕಾಟ್‌ನಿಂದ ನೋಡುತ್ತೇವೆ. ಅದಕ್ಕಿಂತ ಮುಂಚೆಯೇ ಬಸವಾದಿ ಶರಣರು ನಮ್ಮಲ್ಲಿ ಪ್ರತಿಪಾದಿಸಿದ್ದಾರೆ. ಅದನ್ನು ಯಾರು ಮರೆಯಲಿಕ್ಕೆ ಆಗುವುದಿಲ್ಲ. ಈ ರೀತಿ ಸಾಮಾಜಿಕ ನ್ಯಾಯದ ಬಗ್ಗೆ ಮೊಟ್ಟ ಮೊದಲು ಧ್ವನಿ ಎತ್ತಿದ ಬಸವಾದಿ ಶರಣರ ಆದಿಯಲ್ಲಿ ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ನಡೆಯುತ್ತಿದ್ದಾರೆ ಹಾಗಾಗಿ ಬಹಳ ಸಂತೋಷ ಎಂದು ತಿಳಿಸಿದರು.

ಸ್ವಾತಂತ್ರ್ಯ ಬಂದ ನಂತರ ಸಿಕ್ಕಿದ್ದು ಸಂವಿಧಾನ, ನಮ್ಮ ಸಂವಿಧಾನಕ್ಕೂ ಬಸವಣ್ಣನವರ ವಚನಗಳಿಗೂ ಯಾವುದೆ ವ್ಯತ್ಯಾಸವಿಲ್ಲ, ನಾನು ಅನೇಕ ಸಲ ಹೇಳುತ್ತಿರುತ್ತೇನೆ, ಸಂವಿಧಾನದ ಪ್ರತಿ ಅನುಚ್ಛೇದಕ್ಕೂ ಬಸವಾದಿ ಶರಣರ ಅನೇಕ ವಚನಗಳನ್ನು ಅಡಿ ಟಿಪ್ಪಣಿಗಳಾಗಿ ಕೊಡಬಹುದು. ನಾವೆಲ್ಲ ಇಂದು ಇಲ್ಲಿ ಕುಳಿತಿದ್ದೇವೆ ಎಂದರೆ ಸಂವಿಧಾನ ಕೊಟ್ಟ ರಕ್ಷಣೆ, ನೀವು ಓದುತ್ತಿದ್ದೀರಿ ಎಂದರೆ ಸಂವಿಧಾನದ ಕೊಡುಗೆ. ನೀವು ಒಳ್ಳೆಯ ಪ್ರಜೆಗಳಾಗಬೇಕು, ಮೌಲ್ಯಗಳನ್ನ ಅಳವಡಿಸಿಕೊಳ್ಳಬೇಕು, ಬುದ್ಧ, ಬಸವ, ಅಂಬೇಡ್ಕರ್ ಮೌಲ್ಯಗಳನ್ನ ಅಳವಡಿಸಿಕೊಳ್ಳಬೇಕು ಹಾಗ ಉತ್ತಮ ಪ್ರಜೆಗಳಾಗುತ್ತೀರ ಎಂದು ಹೇಳಿದರು.ಬಸವ ಪರಂಪರೆಯಲ್ಲಿ ಅನ್ನದಾಸೋಹ, ಅಕ್ಷರ ದಾಸೋಹ ಬಂದಿದೆ. ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿಯವರು ಅದನ್ನು ಮುಂದುವರೆಸಿಕೊಂಡು ಹೋಗುತ್ತಿದ್ದಾರೆ. ಈ ರೀತಿಯ ಪುಣ್ಯ ನಿಮಗೆ ಸಿಕ್ಕಿದೆ. ನಾನು ಕೋಲಾರ ಜಿಲ್ಲೆಯಿಂದ ಬಂದವನು, ಮಠ ಪರಂಪರೆ ಇರಲಿಲ್ಲ, ಎಲ್ಲೋ ಸೇರಿದಿವಿ, ಎಲ್ಲೋ ಓದಿದಿವಿ, ಇಲ್ಲಿಗೆ ಬಂದ ಮೇಲೆ ಅರ್ಥವಾಗಿದ್ದು ಬಸವಾದಿ ಶರಣರು ಹೇಗೆ ಇದ್ದರು, ಎಂತಹ ಕಷ್ಟಪಟ್ಟರು, ಸಾಮಾಜಿಕ ನ್ಯಾಯ ಉಳಿಸಿಕೊಳ್ಳಲಿಕ್ಕೆ ಎಂಬುವುದನ್ನು ಓದಿ, ತಿಳಿಯಲು ಆರಂಭವಾಯಿತು. ನಾನು ಇಲ್ಲಿ ನಿಂತು ಮಾತನ್ನಾಡುತ್ತಿದ್ದೇನೆ ಎಂದರೆ ಬುದ್ಧ, ಬಸವ, ಅಂಬೇಡ್ಕರ್ ಅದರಲ್ಲೂ ಅಂಬೇಡ್ಕರ್ ಕೊಟ್ಟ ಸಂವಿಧಾನ ಅಂತಾ ಹೇಳುತ್ತೇನೆ ಎಂದು ತಿಳಿಸಿದರು.ವೇದಿಕೆಯಲ್ಲಿ ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ, ಭೋವಿ ನಿಗಮದ ಮಾಜಿ ಅಧ್ಯಕ್ಷ ಸೀತಾರಾಮು,

ಫಾಸ್ಟ್ ನ್ಯೂಸ್

ಜಿಲ್ಲಾಧಿಕಾರಿಗೆ ಸನ್ಮಾನ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾಧಿಕಾರಿಯಾಗಿ ನೂತನವಾಗಿ ಅಧಿಕಾರ ವಹಿಸಿಕೊಂಡಿರುವ ವೆಂಕಟೇಶ್‌ರವರಿಗೆ ಅಖಿಲ ಕರ್ನಾಟಕ ಜನಸೇವಾ ಸಂಘ ಅಗ್ರಿಕಲ್ಚರಲ್ ಡೆವಲಪ್‌ಮೆಂಟ್ ಇಂಡಸ್ಟ್ರಿಸ್ ವತಿಯಿಂದ ಶಾಲು ಹೊದಿಸಿ ಸನ್ಮಾನಿಸಲಾಯಿತು. ಅಖಿಲ ಕರ್ನಾಟಕ ಜನಸೇವಾ ಸಂಘ ಅಗ್ರಿಕಲ್ಚರಲ್ ಡೆವಲಪ್‌ಮೆಂಟ್ ಇಂಡಸ್ಟ್ರಿಸ್ ಅಧ್ಯಕ್ಷ ಹೆಚ್.ಆರ್.ಮಹಮದ್, ಸದಸ್ಯರುಗಳಾದ ಜಮೀರ್‌ಖಾನ್, ಅಬ್ದುಲ್ ಖಯೂಂ, ಮುಹಿಬುಲ್ಲಾ, ರಫಿ, ಸಾದತ್‌ವುಲ್ಲಾ ಈ ಸಂದರ್ಭದಲ್ಲಿದ್ದರು.

ಅಪ್ರಾಪ್ತ ಬಾಲಕಿ ಬಾಲ್ಯವಿವಾಹ, ಮಗುವಿನ ಜನನಕ್ಕೆ ಕಾರಣನಾದವನ ಮೇಲೆ ಪೋಕ್ಸೋ ಪ್ರಕರಣ

» ಚಳ್ಳಕೆರೆ

ತಾಲ್ಲೂಕಿನ ರಂಗವ್ವನಹಳ್ಳಿ ಗ್ರಾಮದಲ್ಲಿ ಅಪ್ರಾಪ್ತ ಬಾಲಕಿಯನ್ನು ಮದುವೆಯಾಗಿದ್ದಲ್ಲದೆ, ಆಕೆ ಗರ್ಭವತಿಯಾಗಿ ಗಂಡುಮಗುವಿಗೆ ಜನ್ಮ ನೀಡಿದ ಹಿನ್ನೆಲೆಯಲ್ಲಿ ಅಪ್ರಾಪ್ತ ಬಾಲಕಿಯ ಕಾನೂನು ಬಾಹಿರವಾಗಿ ಮದುವೆಯಾಗಿ ಮಗುವಿಗೆ ಜನ್ಮನೀಡಲು ಕಾರಣನಾದ ಅದೇ ಊರಿನ ಟಿ.ಗಂಗಪ್ಪ(28) ಎಂಬುವವನ ವಿರುದ್ಧ ಪೊಲೀಸರು ಪೋಕ್ಸೋ ಪ್ರಕರಣ ದಾಖಲಿಸಿದ್ದಾರೆ. ಈ ಬಗ್ಗೆ ಅಪ್ರಾಪ್ತ ಬಾಲಕಿಯ ತಾಯಿ ತಿಪ್ಪಮ್ಮ ಪೊಲೀಸರಿಗೆ ದೂರು ನೀಡಿದ್ದು, ನನ್ನ ಮಗಳು 17 ವರ್ಷದವಳಾಗಿದ್ದು, ಅದೇ ಗ್ರಾಮದ ಟಿ.ಗಂಗಪ್ಪ ಎಂಬಾತನೊಂದಿಗೆ ಕಳೆದ ಕೆಲವು ತಿಂಗಳುಗಳಿಂದ ಇಬ್ಬರೂ ಪ್ರೀತಿಮಾಡಿ ಮದುವೆ ಮಾಡಿಕೊಳ್ಳಲು ಮುಂದಾದಾಗ ನಾವು ವಿರೋಧ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಕಳೆದ ಮೇ. 2023ರಂದು ಗ್ರಾಮದ ಮಾರಮ್ಮ ದೇವಸ್ಥಾನದಲ್ಲಿ ಗಂಗಮ್ಮ ನನ್ನ ಮಗಳನ್ನು ಬಾಲ್ಯವಿವಾಹ ಮಾಡಿಕೊಂಡು ಅವನ ಮನೆಯಲ್ಲಿ ಸಂಸ್ಕಾರ ಮಾಡುತ್ತಿದ್ದು, ಜ.21ರಂದು ನನ್ನ ಮಗಳು ಗಂಡುಮಗುವಿಗೆ ಜನ್ಮ ನೀಡಿದ ಬಗ್ಗೆ ಪೊಲೀಸರಿಗೆ ದೂರು ನೀಡಿರುವುದಾಗಿ ತಿಳಿಸಿದ್ದಾರೆ. ಪಿಎಸ್‌ಐ ಜೆ.ಶಿವರಾಜ್ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

ದುಗ್ಗಾವರ ಬಳಿ ನಿಯಂತ್ರಣ ತಪ್ಪಿ ಬೈಕ್ ಪಲ್ಟಿ: ನಿವೃತ್ತ ಶಿಕ್ಷಕ ರಂಗಪ್ಪ ಸಾವು.

» ಚಳ್ಳಕೆರೆ

ತಾಲ್ಲೂಕಿನ ದುಗ್ಗಾವರ ಗ್ರಾಮದ ಜಯಮ್ಮ ಎಂಬುವವರ ಪಂಚರ್ ಅಂಗಡಿ ಬಳಿ ತನ್ನದೇ ಮೋಟಾರ್ ಬೈಕ್‌ನಲ್ಲಿ ಚಳ್ಳಕೆರೆ ಕಡೆ ಪ್ರಯಾಣಿಸುತ್ತಿದ್ದ ನಿವೃತ್ತ ಶಿಕ್ಷಕ ರಂಗಪ್ಪ(62) ಮೋಟಾರ್ ಸೈಕಲ್‌ನ್ನು ಜೋರಾಗಿ ನಡೆಸಿಕೊಂಡು ಬಂದ ಹಿನ್ನೆಲೆಯಲ್ಲಿ ನಿಯಂತ್ರಣ ತಪ್ಪಿ ಪಕ್ಕದ ಗೋವಿಂದಪ್ಪನವರ ಬೀಳು ಜಮೀನಿನಲ್ಲಿ ಬೈಕ್ ಸಮೇತ ಬಿದಿದ್ದು, ಕೂಡಲೇ ನಾವೆಲ್ಲರೂ ರಂಗಪ್ಪನನ್ನು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿದಾಗ ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿರುತ್ತಾರೆ. ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

ಬೊಮ್ಮೇನಹಳ್ಳಿ ಗ್ರಾ.ಪಂ: ವಿವಿಧ ಗ್ರಾಮಗಳಲ್ಲಿ ಸಭೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಬೊಮ್ಮೆನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಮಂಗಳವಾರ ಗ್ರಾಮ ಸಭೆ ನಡೆಸಲಾಯಿತು.

ಬೊಮ್ಮನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಬೊಮ್ಮೇನಹಳ್ಳಿ, ಕಡ್ಲೆಗುದ್ದು ಮತ್ತು ಮೇಗಳಹಳ್ಳಿ ಗ್ರಾಮಗಳಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರ ಅಧ್ಯಕ್ಷತೆಯಲ್ಲಿ ಗಣಿ ಬಾಧಿತ ಪ್ರದೇಶಗಳಲ್ಲಿ ವಾಸ ಮಾಡುವ ವಸತಿ ರಹಿತ ಫಲಾನುಭವಿಗಳಿಗೆ ವಸತಿ ಯೋಜನೆಯಡಿ ವಸತಿ ಸೌಲಭ್ಯ ಕಲ್ಪಿಸಲು 129 ವಸತಿ ರಹಿತ ಫಲಾನುಭವಿಗಳನ್ನು ಗ್ರಾಮ ಸಭೆಯ ಮೂಲಕ ಆಯ್ಕೆ ಮಾಡಲಾಯಿತು, ಗ್ರಾಮ ಸಭೆಯಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹನುಮಂತಪ್ಪ, ಗ್ರಾಮ ಪಂಚಾಯತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು ಹಾಗೂ ಗ್ರಾಮಸ್ಥರು, ವಿವಿಧ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳು ಗ್ರಾಮ ಸಭೆಯಲ್ಲಿ ಹಾಜರಿದ್ದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ನ್ಯಾಯಾಧೀಶೆ ಕೆ.ಬಿ.ಗೀತಾ ಮಾಹಿತಿ

ಮಾ.9ರಂದು ಮೆಗಾ ಲೋಕ್ ಅದಾಲತ್

» ಚಿತ್ರದುರ್ಗ

ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರದ ತೀರ್ಮಾನದಂತೆ ಹಾಗೂ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ನಿರ್ದೇನದಂತೆ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಈ ವರ್ಷದ ಮೊದಲ ಮೆಗಾ ಲೋಕ್ ಅದಾಲತ್‌ನ್ನು 2024ರ ಮಾರ್ಚ್ 09 ರಂದು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪ್ರಧಾನ ಮತ್ತು ಸೆಷನ್ಸ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷೆ ಕೆ.ಬಿ. ಗೀತಾ ಹೇಳಿದರು.

ನಗರದ ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ಸೋಮವಾರ ರಾಷ್ಟ್ರೀಯ ಲೋಕ ಅದಾಲತ್ ಕುರಿತು ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಕಳೆದ ವರ್ಷ 2023 ನೇ ಸಾಲಿನಲ್ಲಿ ಒಟ್ಟು 4 ಮೆಗಾ ಲೋಕ್ ಅದಾಲತ್ ಮಾಡಿದ್ದು, ಅವುಗಳಲ್ಲಿ ನ್ಯಾಯಾಲಯದಲ್ಲಿ ಚಾಲ್ತಿಯಲ್ಲಿ ಇದ್ದಂತಹ ಒಟ್ಟು 10,601 ಪ್ರಕರಣಗಳನ್ನು ಹಾಗೂ ವ್ಯಾಜ್ಯಪೂರ್ವ 3,34,251 ಪ್ರಕರಣಗಳನ್ನು ಸೇರಿಸಿ ಒಟ್ಟು 3,44,852 ಪ್ರಕರಣಗಳನ್ನು ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯಲ್ಲಿ ವಿಲೇವಾರಿ ಮಾಡಿರುತ್ತೇವೆ. ಚಿತ್ರದುರ್ಗ ನ್ಯಾಯಾಲಯಗಳ ವ್ಯಾಪ್ತಿಯಲ್ಲಿ ವಿಚ್ಛೇಧನಕ್ಕಾಗಿ ಅರ್ಜಿ ಸಲ್ಲಿಸಿದ್ದ ಒಟ್ಟು 18 ಜೋಡಿಗಳನ್ನು ಪುನಃ ಒಂದು ಮಾಡಲಾಗಿದೆ ಎಂದು ತಿಳಿಸಿದರು.

ಈ ವರ್ಷವೂ ಸಹ ಒಟ್ಟು 04 ಮೆಗಾ ಲೋಕ್ ಅದಾಲತ್‌ನ್ನು ಹಮ್ಮಿಕೊಂಡಿದ್ದು, ಅದರಲ್ಲಿ ಮೊಟ್ಟ ಮೊದಲನೆಯ ಲೋಕ್ ಅದಾಲತ್ 2024ರ ಮಾರ್ಚ್ 9 ರಂದು ಜಿಲ್ಲೆಯ ಎಲ್ಲ ನ್ಯಾಯಾಲಯಗಳಲ್ಲಿಯೂ ನಡೆಯಲಿದೆ ಎಂದು ತಿಳಿಸಿದ ಅವರು, ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ 21,687 ಸಿವಿಲ್ ಪ್ರಕರಣಗಳು, 18,376 ಕ್ರಿಮಿನಲ್ ಪ್ರಕರಣಗಳು ಸೇರಿದಂತೆ ಒಟ್ಟು 40,063 ಪ್ರಕರಣಗಳು ಬಾಕಿ ಇದ್ದು, ಇದರಲ್ಲಿ ಸುಮಾರು 10 ಸಾವಿರ ಪ್ರಕರಣಗಳನ್ನು ರಾಜೀ ಮಾಡುವ ಗುರಿ ಹೊಂದಲಾಗಿದೆ ಎಂದು ಮಾಹಿತಿ ನೀಡಿದರು.

ಲೋಕ್ ಅದಾಲತ್ ಅಥವಾ ಜನತಾ ನ್ಯಾಯಾಲಯದ ಮೂಲ ಉದ್ದೇಶವೇನೆಂದರೆ ಪಕ್ಷಗಾರರು ರಾಜೀ ಸಂಧಾನದ ಮೂಲಕ ತಮ್ಮ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಂಡು ಸೌಹಾರ್ದಯುತವಾದ ಜೀವನವನ್ನು ನಡೆಸಲು ಸಾಧ್ಯವಾಗಬೇಕು. ರಾಜೀ ಸಂಧಾನದ ಮೂಲಕ ತಮ್ಮ ಪ್ರಕರಣಗಳನ್ನು ಸುಲಭವಾಗಿ ಶೀಘ್ರವಾಗಿ ಯಾವುದೇ ಶುಲ್ಕವಿಲ್ಲದೇ ಖರ್ಚು ವೆಚ್ಚವಿಲ್ಲದೇ ತೀರ್ಮಾನ ಮಾಡಿಕೊಳ್ಳಬಹುದು. ಜನತಾ ನ್ಯಾಯಾಲಯದಲ್ಲಿ ಒಬ್ಬರು ಹಾಲಿ ನ್ಯಾಯಾಧೀಶರು ಹಾಗೂ ನುರಿತ ವಕೀಲರು ಸಂಧಾನಕಾರರಾಗಿ ಇರುತ್ತಾರೆ. ನ್ಯಾಯಾಲಯದಲ್ಲಿ ಚಾಲ್ತಿ ಇರುವ ಪ್ರಕರಣಗಳನ್ನು ಹಾಗೂ ಇನ್ನೂ ನ್ಯಾಯಾಲಯವನ್ನು ಪ್ರವೇಶಿಸದೇ ಇರುವಂತಹ ಪ್ರಕರಣಗಳನ್ನು ಸಹ ನಾವು ಜನತಾ ನ್ಯಾಯಾಲಯದಲ್ಲಿ ಪರಿಹರಿಸಿಕೊಳ್ಳಬಹುದು ಎಂದು ತಿಳಿಸಿದರು.

ಈ ಲೋಕ್ ಅದಾಲತ್‌ನ ಉಪಯೋಗವೇನೆಂದರೇ ಒಂದೇ ಸಿಟ್ಟಿಂಗ್‌ನಲ್ಲಿ ತಮ್ಮ ಪ್ರಕರಣಗಳನ್ನು ಕಕ್ಷಿದಾರರು ನೇರವಾಗಿ ಶೀಘ್ರವಾಗಿ ಇತ್ಯರ್ಥ ಪಡಿಸಿಕೊಳ್ಳಬಹುದು ಅಥವಾ ವಕೀಲರ ಮೂಲಕ ಕೂಡ ಭಾಗವಹಿಸಬಹುದು. ಉಭಯ ಪಕ್ಷಗಾರರಿಗೂ ಒಪ್ಪಿಗೆಯಾದರೇ ಮಾತ್ರ ಲೋಕ್ ಅದಾಲತ್‌ನಲ್ಲಿ ಅಂತಿಮ ತೀರ್ಮಾನವಾಗುತ್ತದೆ. ಈ ಅಂತಿಮ ತೀರ್ಮಾನವು ನ್ಯಾಯಾಲಯದಲ್ಲಿ ಡಿಕ್ರಿಯಾದರೇ ಯಾವ ಮೌಲ್ಯವನ್ನು ಹೊಂದಿರುತ್ತದೋ ಅದೇ ಮೌಲ್ಯವನ್ನು ಹೊಂದಿರುತ್ತದೆ. ಆಕಸ್ಮಾತಾಗಿ ಆ ಅಂತಿಮ ತೀರ್ಮಾನದ ಪ್ರಕಾರವಾಗಿ ಯಾರಾದರೂ ಒಬ್ಬ ಪಕ್ಷಗಾರರು ನಡೆದುಕೊಳ್ಳದಿದ್ದರೆ ಆಗ ಅವರ ವಿರುದ್ಧ ನ್ಯಾಯಾಲಯದಲ್ಲಿ ಅಮಲ್ಜಾರಿ ಅರ್ಜಿಯನ್ನು ಸಲ್ಲಿಸಿ ಆ ತೀರ್ಮಾನಕ್ಕೆ ಅವರನ್ನು ಬದ್ಧರಾಗಿ ಮಾಡಬಹುದು. ಈ ಲೋಕ್ ಅದಲಾತ್‌ನಲ್ಲಿ ರಾಜಿ ಸಂಧಾನವಾದರೆ ಉಭಯ ಪಕ್ಷಗಾರರ ಬಾಂಧವ್ಯವು ಅಭಿವೃದ್ಧಿಯಾಗಿ ವಿವಾದವು ಸುಖಾಂತ್ಯವಾಗುತ್ತದೆ. ಯಾವುದೇ ಮೇಲ್ಮನವಿ ಸಲ್ಲಿಸಲು ಅವಕಾಶವಿರುವುದಿಲ್ಲದ ಕಾರಣ ಅದು ಅಂತಿಮ ತೀರ್ಮಾನವಾಗುತ್ತದೆ ಎಂದರು.ಈ ಜನತಾ ನ್ಯಾಯಾಲಯದಲ್ಲಿ ವ್ಯಾಜ್ಯಪೂರ್ವ ಪ್ರಕರಣಗಳಲ್ಲಿ ಚೆಕ್ ಅಮಾನ್ಯದ ಪ್ರಕರಣಗಳು ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದ್ಯೋಗ ಪುನಃ ಸ್ಥಾಪಿಸಲ್ಪಡಬೇಕಾದ ಪ್ರಕರಣಗಳು, ಇತರೆ ಕಾರ್ಮಿಕ ವಿವಾದಗಳು, ಕೈಗಾರಿಕಾ ಕಾರ್ಮಿಕರ ವೇತನಕ್ಕೆ ಸಂಬಂಧಪಟ್ಟಂತಹ ಪ್ರಕರಣಗಳು, ವಿದ್ಯುತ್ ನೀರಿನ ಶುಲ್ಕದ ಪ್ರಕರಣಗಳು ಹಾಗೂ ನಾನ್ ಕಾಂಪೌಂಡಬಲ್ ಪ್ರಕರಣಗಳನ್ನು ಹೊರತುಪಡಿಸಿದ ಉಳಿದ ಎಲ್ಲಾ ಅಪರಾಧಿಕ ಪ್ರಕರಣಗಳು ವಿಚ್ಛೇದನವನ್ನು ಹೊರತುಪಡಿಸಿ ಇತರೇ ವೈವಾಹಿಕ ಪ್ರಕರಣಗಳನ್ನು ಹಾಗೂ ನ್ಯಾಯಾಲಯದಲ್ಲಿ ಚಾಲ್ತಿಯಲ್ಲಿ ಇರುವ ಎಲ್ಲಾ ರೀತಿಯ ಸಿವಿಲ್ ಪ್ರಕರಣಗಳನ್ನು ಮತ್ತು ರಾಜಿ ಮಾಡಿಕೊಳ್ಳಬಹುದಾದಂತಹ ಅಪರಾಧಿಕ ಪ್ರಕರಣಗಳನ್ನು ಕೈಗಾರಿಕಾ ಕಾರ್ಮಿಕರ ವೇತನದ ಪ್ರಕರಣಗಳು, ಜಿಲ್ಲಾ ಗ್ರಾಹಕರ ಪರಿಹಾರ ಆಯೋಗದಲ್ಲಿ ಇರತಕ್ಕಂತಹ ಪ್ರಕರಣಗಳು ಚೆಕ್ ಅಮಾನ್ಯದ ಪ್ರಕರಣಗಳು ಹಾಗೂ ಎಲ್ಲಾ ರೀತಿಯ ಪ್ರಕರಣಗಳನ್ನು ರಾಜಿ ಮಾಡಿಕೊಳ್ಳಬಹುದು ಎಂದರು.

2024ರ ಮಾರ್ಚ್ 09 ರಂದು ನಡೆಯುತ್ತಿರುವ ಈ ಮೆಗಾ ಲೋಕ್ ಅದಾಲತ್‌ನಲ್ಲಿ ಸಾರ್ವಜನಿಕರು ಕಕ್ಷಿದಾರರು ಭಾಗವಹಿಸಿ ತಮ್ಮ ಅನೇಕ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಂಡು ಈ ಜನತಾ ನ್ಯಾಯಾಲಯದ ಉದ್ದೇಶವನ್ನು ಸಫಲಗೊಳಿಸಲಿ ಮತ್ತು ಇದು ಎಲ್ಲಾ ಜನರನ್ನು ತಲುಪಲಿ ಎಂಬ ಸದುದ್ದೇಶದಿಂದ ಈ ಕಾರ್ಯಕ್ರಮ ಅಯೋಜಿಸಲಾಗಿದೆ. ಲೋಕ್ ಅದಾಲತ್‌ಗೆ ಸಂಬಂಧಿಸಿದಂತೆ ನಮ್ಮ ಇ–ಮೇಲ್ ಜಟಿ ಚಿಭ್ಯಿಂಣ ಡಿ ಚಿ ಜಣ ಡಿ ರ ಚಿ 1@ ರಟಚಿಟ.ಭಿಠಟ ಗೆ ಸಂಪರ್ಕಿಸಬಹುದು. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯವರ ಕಚೇರಿ ದೂರವಾಣಿ ಸಂಖ್ಯೆ 08194–222322 ಕ್ಕೂ ಸಂಪರ್ಕಿಸಬಹುದು ಹಾಗೂ ಚಿತ್ರದುರ್ಗ ಜಿಲ್ಲಾ ನ್ಯಾಯಾಲಯದಲ್ಲಿ ಇರುವ ಸದಸ್ಯ ಕಾರ್ಯದರ್ಶಿಗಳ ಕಚೇರಿಗೆ ಖುದ್ದಾಗಿ ಭೇಟಿ ಮಾಡಿ ತಮ್ಮ ಪ್ರಶ್ನೆಗಳಿಗೆ ಉತ್ತರ ಕಂಡುಕೊಳ್ಳಬಹುದು ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಇದ್ದರು.

ಬುಡಕಟ್ಟು ಯಾದವ ಸಮುದಾಯದ ಕೇತೇದೇವರ ಜಾತ್ರೆ ಯಶಸ್ವಿಮುಕ್ತಾಯ

ಮುಳ್ಳಿನದೇವಸ್ಥಾನದ ಮೇಲೆ ಸ್ಥಾಪಿಸಿದ್ದ ಕಳಸ ಇಳಿಸುವ ಮೂಲಕ ಜಾತ್ರೆಗೆ ತೆರೆ

» ಚಳ್ಳಕೆರೆ

ಮಧ್ಯಕರ್ನಾಟಕ ಚಿತ್ರದುರ್ಗ ಜಿಲ್ಲೆಯ ಬಯಲುಸೀಮೆಯ ಬುಡಕಟ್ಟು ಯಾದವ ಸಮುದಾಯದ ಆರಾಧ್ಯದೈವ ಕೇತೆದೇವರ ಜಾತ್ರೆ ಸಂಭ್ರಮ ಸಡಗರಗಳಿಂದ ಸೋಮವಾರ ನಡೆಯಿತು. ಸಾವಿರಾರು ಭಕ್ತರು ಜಾತ್ರೆಯಲ್ಲಿ ಪಾಲ್ಗೊಂಡುಶ್ರೀಕೇತೆದೇವರಕೃಪೆಗೆಪಾತ್ರರಾದರು. ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಪುರ್ಲಹಳ್ಳಿ ಗ್ರಾಮದಲ್ಲಿ ಪುರ್ಲಹಳ್ಳಿ ಗ್ರಾಮದ ವಸಲುದಿನ್ನೆಯಲ್ಲಿ ಕಳೆದ 12ದಿನಗಳಿಂದ ಈ ಜಾತ್ರೆ ನಡೆಯುತ್ತಿದ್ದು ಮುಳ್ಳಿನಿಂದ ನಿರ್ಮಿಸಲಾದ ಗುಡಿಯ ಮೇಲೆ ಸ್ಥಾಪಿಸಿದ ಕಳಸವನ್ನು ಇಳಿಸುವ ಮೂಲಕ ಜಾತ್ರೆಗೆ ತೆರೆಬಿದ್ದಿತು.

ಕ್ಷೇತ್ರದ ಶಾಸಕರಾದ ಟಿ.ರಘುಮೂರ್ತಿ ಸೇರಿದಂತೆ ಸಮುದಾಯದ ಅನೇಕ ಮುಖಂಡರು ಹಾಗೂ ವಿವಿಧ ರಾಜಕೀಯ ಪಕ್ಷಗಳ ಮುಖಂಡರೂ ಸಹಜಾತ್ರೆಯಲ್ಲಿಪಾಲ್ಗೊಂಡಿದ್ದರು. ಡಿವೈಎಸ್ಪಿ ರಾಜಣ್ಣ, ವೃತ್ತ ನಿರೀಕ್ಷಕ ಕೆ.ಸಮೀವುಲ್ಲಾ ನೇತೃತ್ವದಲ್ಲಿ ಪರಶುರಾಮಪುರ ಪೊಲೀಸರು ಸೂಕ್ತಬಂದೋಬಸ್ತ್ ಏರ್ಪಡಿಸಿದ್ದರು.

ಜಾನಪದ ಹಿನ್ನೆಲೆವುಳ್ಳ ಬುಡಕಟ್ಟು ಸಮುದಾಯಗಳು ಇಂದಿಗೂ ಸಹ ತಮ್ಮದೇಯಾದ ವಿಶೇಷ ಪದ್ದತಿಯಲ್ಲಿ ದೇವರ ಉತ್ಸವಗಳನ್ನು ಆಚರಿಸಿಕೊಂಡು ಬಂದಿದ್ದು, ಹಿರಿಯರು ಆಚರಿಸಿದ ಸಂಪ್ರದಾಯ, ಪರಂಪರೆಯಂತೆ ಪೂಜಾ ಪದ್ದತಿಗಳನ್ನು ನಡೆಸಿಕೊಂಡು ಬರುತ್ತಿದ್ದಾರೆ. ಈ ಜಾತ್ರೆಗೆ ಚಳ್ಳಕೆರೆ ತಾಲ್ಲೂಕು ಸೇರಿದಂತೆ ರಾಜ್ಯದ ಮೂಲೆ ಮೂಲೆಗಳಿಂದ ಕಾಡುಗೊಲ್ಲರ ಬೊಮ್ಮನಗೌಡರು, ಕೋಣನಗೌಡರು, 13 ಗುಡಿಕಟ್ಟಿನ ಅಣ್ಣ ತಮ್ಮಂದಿರುವ ಭಾಗವಹಿಸಿ ಜಾತ್ರೆ ಆಚರಣೆ ಮಾಡುವುದು ವಿಶೇಷ. ಈ ಜಾತ್ರೆಗೆ ಲಕ್ಷಾಂತರ ಸಂಖ್ಯೆಯ ಭಕ್ತರು ಹಾಜರಿದ್ದು, ತಮ್ಮ ಆರಾಧ್ಯ ದೈವಕ್ಕೆ ಭಕ್ತಿ ಪೂರ್ವಕ ನಮನಗಳನ್ನು ಸಲ್ಲಿಸಿದರು. ಪ್ರತಿವರ್ಷದಂತೆ ಈ ವರ್ಷವೂ ಸಹ ಕೇತೇ ದೇವರು, ಬತುವಿನ ದೇವರು, ಈರಣ್ಣ, ಸಿರಿಯಣ್ಣ ಕೋಣತಮ್ಮಣ್ಣ, ಬಾಲದೇವರು ಮುಂತಾದ ದೇವರುಗಳನ್ನು ಅಲಂಕೃತಗೊಳಿಸಿ ಬುಡಕಟ್ಟು ಸಮುದಾಯದವರೇ ನಿರ್ಮಿಸಿದ ಮುಳ್ಳಿನ ಗುಡಿಯಲ್ಲಿಟ್ಟು ಭಕ್ತಿಯಿಂದ ತಮ್ಮ ಸೇವೆಯನ್ನು ಸಮರ್ಪಿಸಿದರು.

ಗೊಲ್ಲ ಸಮುದಾಯದ 13 ಗುಡಿಕಟ್ಟಿನ ಭಕ್ತರು ಈ ಜಾತ್ರೆಯ ವಾರಸುದಾರರಾಗಿದ್ದು, ಇದರಲ್ಲಿ ಎರಡು ಪಂಗಡದಲ್ಲಿ ಕೋಣನಗೌಡರು ಮತ್ತು ಬೊಮ್ಮನಗೌಡರು ಎಂದು ಗುರುತಿಸಿದ್ದು, ಇದರಲ್ಲಿ ಮುಳ್ಳಿನ ಗುಡಿಗೆ ಕಳಸವಿಡುವುದು ಬೊಮ್ಮನಗೌಡರಾಗಿದ್ದು, ಕಳಸ ಕೀಳುವ ಜವಾಬ್ದಾರಿ ಕೋಣನಗೌಡದಾಗಿದೆ. ಪ್ರತಿವರ್ಷದಂತೆ ಈ ವರ್ಷವೂ ಸಹ ಯಾದವ ಸಮುದಾಯದ ಬಹುತೇಕ ಭಕ್ತರು ಜಾತ್ರೆಯಲ್ಲಿ ಪಾಲ್ಗೊಂಡಿದ್ದು, ಕಳಸ ಕೀಳುವ ಸಂದರ್ಭವನ್ನು ನೋಡಲು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಜಮಾಯಿಸಿದ್ದರು. ಈ ಭಾರಿ ಮುಳ್ಳಿನ ಗುಡಿಯ ಮೇಲಿದ್ದ ಕಳಸವನ್ನು ದ್ವಾರಣಗುಂಟೆಯ ರಾಜು ಕಳಸ ಕಿತ್ತ ಪ್ರಥಮ ವ್ಯಕ್ತಿಯಾಗಿ ಹೊರಹೊಮ್ಮಿದರು. ಇವರನ್ನು ಗ್ರಾಮವೂ ಸೇರಿದಂತೆ ಸಮುದಾಯದ ಮುಖಂಡರು ಸನ್ಮಾನಿಸಿದರು.

ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗಗಳ ವಿಭಾಗಕ್ಕೆ ನೇಮಕ

» ಚಿತ್ರದುರ್ಗ

ಚಿತ್ರದುರ್ಗ ನಗರದ ಮಾರುತಿ ನಗರದ ಆರ್.ಮಧುಕುಮಾರ್ ರವರನ್ನು ಪ್ರದೇಶ ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯಾಧ್ಯಕ್ಷರಾದ ಮಧು ಬಂಗಾರಪ್ಪರವರ ಅನುಮೋದನೆ ಮೇರೆಗೆ, ಡಿಸಿಸಿ ಕಾಂಗ್ರೆಸ್ ಅಧ್ಯಕ್ಷರ ಶಿಫಾರಸ್ಸಿನಂತೆ ಜಿಲ್ಲಾಧ್ಯಕ್ಷ ಎನ್.ಡಿ.ಕುಮಾರ್‌ರವರು ಚಿತ್ರದುರ್ಗ ಜಿಲ್ಲಾ ಹಿಂದುಳಿದ ವರ್ಗಗಳ ವಿಭಾಗದ ಚಿತ್ರದುರ್ಗ ಜಿಲ್ಲಾ ಕಾರ್ಯದರ್ಶಿಯನ್ನಾಗಿ ನೇಮಕ ಮಾಡಿ ಇಂದು ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಆದೇಶವನ್ನು ನೀಡಲಾಯಿತು.ಈ ಸಂದರ್ಭದಲ್ಲಿ ಮಾತನಾಡಿದ ಚಿತ್ರದುರ್ಗ ಜಿಲ್ಲಾ ಹಿಂದುಳಿದ ವರ್ಗಗಳ ಜಿಲ್ಲಾಧ್ಯಕ್ಷ ಎನ್.ಡಿ.